ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 296 RNI Number : KNKAN/25/A2770 09-11-2026 Monday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:296 ರಾಯಚೂರು 09-11-2026 ಸೋಮವಾರ ಪುಟ 04 ಬೆಲೆ ರೂ.2/- Postal Reg Number:RCR/L/RNP/117/2026-28

ದೇಶದ ಭದ್ರತೆಗಾಗಿ ನಕ್ಸಲ್ ಮನಸ್ಥಿತಿಯವರನ್ನು ಗುರುತಿಸಿ ಸೋಲಿಸಿ': ಯೋಧರೊಂದಿಗೆ ದೀಪಾವಳಿ ಆಚರಿಸಿದ ಮೋದಿ

ಬಸ್ತಾ(ಛತ್ತೀಸ್‌ಗಢ): ದಿಮಾಗಿ ನಕ್ಸಲರ (ನಕ್ಸಲ್ ಮನಸ್ಥಿತಿಯವರು) ಬಗ್ಗೆ ಎಚ್ಚರಿಕೆ ನೀಡಿದ ಪ್ರಧಾನಿ ನರೇಂದ್ರ ಮೋದಿ, ದೇಶದ ಭದ್ರತೆಗಾಗಿ ಇವರನ್ನು ಗುರುತಿಸಿ, ಸೋಲಿಸಬೇಕಾದ ಅಗತ್ಯವಿದೆ ಎಂದು ಕರೆ ಕೊಟ್ಟರು.

ಛತ್ತೀಸ್ ಗಢದ ಬಸ್ತರ್ ಜಿಲ್ಲೆಯಲ್ಲಿರುವ ಸಿಆರ್‌ಪಿಎಫ್ ಶಿಬಿರದಲ್ಲಿ ಇಂದು ಭದ್ರತಾ ಸಿಬ್ಬಂದಿಯೊಂದಿಗೆ ದೀಪಾವಳಿ ಆಚರಿಸಿ ಅವರು ಮಾತನಾಡಿದರು.

ನಕ್ಸಲಿಸಂ ಅಂತ್ಯಗೊಂಡಿರಬಹುದು, ಆದರೆ ಅದರ ಬೆದರಿಕೆ ಇನ್ನೂ ಸಂಪೂರ್ಣವಾಗಿ ಮಾಯವಾಗಿಲ್ಲ. ಕಾಡುಗಳಿಂದ ಸಶಸ್ತ್ರ ನಕ್ಸಲರನ್ನು ನಿರ್ಮೂಲನೆ ಮಾಡಿರಬಹುದು. ಆದರೆ 'ಬೌದ್ಧಿಕ ನಕ್ಸಲರು' ಅನೇಕ ಸಂಘಟನೆಗಳ ಮೇಲೆ ಹಿಡಿತ ಸಾಧಿಸಿದ್ದಾರೆ. ಇಂದು ಅವರು ದೇಶದ ಪ್ರಜಾಪ್ರಭುತ್ವ ಮತ್ತು ಸಂವಿಧಾನದ ವಿರುದ್ಧ ಜನರನ್ನು ಪ್ರಚೋದಿಸುತ್ತಿದ್ದಾರೆ. ಇಂತಹ 'ಬೌದ್ಧಿಕ ನಕ್ಸಲರು' ಅನೇಕ ರಾಜಕೀಯ ಸಂಘಟನೆಗಳು ಮತ್ತು ಸಂಸ್ಥೆಗಳೊಳಗೆ ನುಸುಳಿದ್ದಾರೆ. ನಾವು ಅವರನ್ನು ಗುರುತಿಸಿ, ಸೋಲಿಸುವ ಮೂಲಕ ದೇಶದ ಭದ್ರತೆಯನ್ನು ಖಚಿತಪಡಿಸಿಕೊಳ್ಳಬೇಕು ಎಂದು ಪ್ರಧಾನಿ ಮೋದಿ ಹೇಳಿದರು.

ಈ ಬಾರಿಯ ದೀಪಾವಳಿ ನಿಜಕ್ಕೂ ವಿಶೇಷವಾಗಿದೆ. ಸುಮಾರು 40-50 ವರ್ಷಗಳ ನಂತರ ಇಂತಹ ಸಂದರ್ಭ ಬಂದಿದೆ. ನಕ್ಸಲಿಸಂ ಮತ್ತು ಮಾವೋವಾದಿ ಭಯೋತ್ಪಾದನೆಯ ವಿರುದ್ಧದ ದಶಕಗಳ ಸುದೀರ್ಘ ಹೋರಾಟದಲ್ಲಿ ದೇಶ ಗೆಲುವು ಸಾಧಿಸಿದ ನಂತರ ಬರುತ್ತಿರುವ ಮೊದಲ ದೀಪಾವಳಿ ಇದಾಗಿದೆ. ದೇಶ ನಕ್ಸಲಿಸಂನಿಂದ ಮುಕ್ತವಾಗಿದ್ದು, ದೇಶವಾಸಿಗಳು ನಕ್ಸಲಿಸಂನ ಭಯದಿಂದ ಹೊರಬಂದಿರುವ ಮೊದಲ ದೀಪಾವಳಿ ಇದು. ಇದೊಂದು ಅಸಾಧಾರಣ ಸಾಧನೆ. ಇದರ ಬಹುಪಾಲು ಶ್ರೇಯಸ್ಸು ನಿಮಗೆ ಸಲ್ಲುತ್ತದೆ. ನಿಮ್ಮಂತಹ ಲಕ್ಷಾಂತರ ಧೈರ್ಯಶಾಲಿ ಪುರುಷರು ಮತ್ತು ಮಹಿಳೆಯರಿಗೆ, ಅಂದರೆ ನಮ್ಮ ಸೈನಿಕರು ಮತ್ತು ಭದ್ರತಾ ಸಿಬ್ಬಂದಿಗೆ ಈ ಶ್ರೇಯಸ್ಸು ಸಲ್ಲಬೇಕು. ಅದಕ್ಕಾಗಿಯೇ ನಾನು ಇಂದು ನಿಮ್ಮೊಂದಿಗೆ ದೀಪಾವಳಿ ಆಚರಿಸಲು ಇಲ್ಲಿಗೆ ಬಂದಿದ್ದೇನೆ ಎಂದರು.



ನಕ್ಸಲಿಸಂ ವಿರುದ್ಧ ಹೋರಾಡಲು ಹಿಂದಿನ ಸರ್ಕಾರ ಏನನ್ನೂ ಮಾಡಲಿಲ್ಲ ಎಂದು ಟೀಕಿಸಿದ ಪ್ರಧಾನಿ ಮೋದಿ, ನಕ್ಸಲಿಸಂ ವಿರುದ್ಧದ ಹೋರಾಟ ಸುಲಭವಾಗಿರಲಿಲ್ಲ. 2004 ಮತ್ತು 2013ರ ನಡುವೆ, ಹತರಾದ ನಕ್ಸಲೈಟ್‌ಗಳ ಸಂಖ್ಯೆಗಿಂತ ಹುತಾತ್ಮರಾದ ಸೈನಿಕರ ಸಂಖ್ಯೆಯೇ ಹೆಚ್ಚಿತ್ತು. ವರ್ಷಕ್ಕೆ ಸುಮಾರು 2,000 ನಕ್ಸಲ್ ದಾಳಿಗಳು ವರದಿಯಾಗುತ್ತಿದ್ದವು. 2010ರಲ್ಲಿ ದಂತೇವಾಡದಲ್ಲಿ ನಕ್ಸಲರೊಂದಿಗಿನ ಸಂಘರ್ಷದ ವೇಳೆ, ಸಿಆರ್‌ಪಿಎಫ್‌ನ () 76 ಯೋಧರು ಮತ್ತು 44 ನಾಗರಿಕರು ಸಾವನ್ನಪ್ಪಿದ್ದರು. ಇಂತಹ ದಾಳಿಗಳು ಪ್ರತಿ ವರ್ಷವೂ ಮುಂದುವರಿದರೂ ಅಂದಿನ ನಮ್ಮ ನಾಯಕರು ಕನಿಷ್ಠ ಕಣ್ಣೀರನ್ನೂ ಸುರಿಸಲಿಲ್ಲ. ಅಂದಿನ ಸರ್ಕಾರಗಳು ನಕ್ಸಲಿಸಂ ಗುಣಪಡಿಸಲಾಗದ ಕಾಯಿಲೆ ಎಂದು ಪರಿಗಣಿಸಿ, ಅದನ್ನು ನಿರ್ಲಕ್ಷಿಸಿದ್ದವು ಎಂದು ಟೀಕಿಸಿದರು.

ನಿಮ್ಮ ತ್ಯಾಗ, ಸಮರ್ಪಣೆ ಮತ್ತು ಸೇವಾ ಮನೋಭಾವಕ್ಕೆ ಕೃತಜ್ಞತೆ ಸಲ್ಲಿಸಲು, 140 ಕೋಟಿ ದೇಶವಾಸಿಗಳ ಪರವಾಗಿ ನಾನು ಇಂದು ಇಲ್ಲಿಗೆ ಬಂದಿದ್ದೇನೆ. ಒಂದು ರಾಷ್ಟ್ರದ ಆಂತರಿಕ ಭದ್ರತೆ ಬಲವಾಗಿದ್ದಾಗ ಬಾಹ್ಯ ಶತ್ರುಗಳು ಯಶಸ್ವಿಯಾಗಲು ಸಾಧ್ಯವಿಲ್ಲ. ಆದರೆ ಆಂತರಿಕ ಭದ್ರತೆ ದುರ್ಬಲಗೊಂಡಾಗ, ಬಾಹ್ಯ ಶತ್ರುಗಳು ತಲೆ ಎತ್ತಲು ಪ್ರಾರಂಭಿಸುತ್ತಾರೆ ಎಂದು ಹೇಳಿದರು.

ರಾಷ್ಟ್ರದ ಏಕತೆ ಮತ್ತು ಸಮಗ್ರತೆಗಾಗಿ ನೀವು ಅಸಂಖ್ಯಾತ ತ್ಯಾಗಗಳನ್ನು ಮಾಡಿದ್ದೀರಿ, ಅಪಾರ ವೈಯಕ್ತಿಕ ತ್ಯಾಗಗಳನ್ನು ನೀಡಿದ್ದೀರಿ. ದೇಶಕ್ಕೆ ನಿಮ್ಮ ಬಗ್ಗೆ ಹೆಮ್ಮೆಯಿದೆ. ನೀವು ಎಲ್ಲೇ ನಿಯೋಜಿತರಾಗಿದ್ದರೂ ಮತ್ತು ಕಾವಲು ಕಾಯುತ್ತಿದ್ದರೂ, ನಿಮ್ಮೆಲ್ಲರಿಗೂ ನನ್ನ ಹೃದಯಪೂರ್ವಕ ದೀಪಾವಳಿ ಶುಭಾಶಯಗಳು. ಕಳೆದ 12 ವರ್ಷಗಳಲ್ಲಿ ದೇಶವು ನಕ್ಸಲಿಸಂ ಮತ್ತು ಪ್ರತ್ಯೇಕತಾವಾದದ ವಿರುದ್ಧದ ಹೋರಾಟದಲ್ಲಿ ಗೆದ್ದಿರುವುದು ಮಾತ್ರವಲ್ಲದೆ, ಬಡತನದ ವಿರುದ್ಧವೂ ದೊಡ್ಡ ಹೋರಾಟ ನಡೆಸಿದೆ ಎಂದರು.

ಈ ವರ್ಷದ ದೀಪಾವಳಿಗೂ ಮುನ್ನ ಕೆಲವೇ ದಿನಗಳ ಹಿಂದೆ, ವಿಶ್ವ ಬ್ಯಾಂಕ್ ತನ್ನ ವರದಿಯಲ್ಲಿ, ಕಳೆದ 12 ವರ್ಷಗಳಲ್ಲಿ ಭಾರತದಲ್ಲಿ 50 ಕೋಟಿ ಜನರು ತೀವ್ರ ಬಡತನದಿಂದ ಹೊರಬಂದಿದ್ದಾರೆ ಎಂದು ತಿಳಿಸಿದೆ. ಬಡತನ ನಿರ್ಮೂಲನೆಯ ಘೋಷಣೆಗಳೊಂದಿಗೆ ದಶಕಗಳ ಕಾಲ ಪ್ರಯತ್ನಿಸಿದರೂ ಸಾಧಿಸಲು ಸಾಧ್ಯವಾಗದ್ದನ್ನು, ದೇಶವು ಕೇವಲ 12 ವರ್ಷಗಳಲ್ಲಿ ಸಾಧಿಸಿದೆ. ಇದೊಂದು ಎಷ್ಟು ದೊಡ್ಡ ಸಾಧನೆ ಎಂಬುದನ್ನು ಊಹಿಸಿಕೊಳ್ಳಬಹುದು ಎಂದು ಅವರು ಹೇಳಿದರು.

ನಾವು ಬಡತನ ನಿರ್ಮೂಲನೆ, ಮಾದಕವಸ್ತು ಮುಕ್ತ ಭಾರತ, ವಿಕಸಿತ ಭಾರತ ಮತ್ತು ಆತ್ಮನಿರ್ಭರ ಭಾರತದ ಬಗ್ಗೆ ಮಾತನಾಡುತ್ತೇವೆ. ನಾವು ಖಂಡಿತವಾಗಿಯೂ ಈ ಗುರಿಗಳನ್ನು ಸಾಧಿಸುತ್ತೇವೆ. ಈ ಕನಸುಗಳು ನಮ್ಮ ಕಣ್ಣಮುಂದೆಯೇ ನನಸಾಗುವುದನ್ನು ನಾವು ಕಾಣಬೇಕು. ನನ್ನ ದೇಶದ ಯುವಶಕ್ತಿಯ ಮೇಲೆ ಮತ್ತು ನಮ್ಮ ರಾಷ್ಟ್ರದ ಜನರ ಮೇಲೆ ನನಗೆ ನಂಬಿಕೆಯಿದೆ ಎಂದರು.

ಪ್ರಧಾನಿ ಮೋದಿ ಅವರು ಸೈನಿಕರು ಮತ್ತು ಭದ್ರತಾ ಸಿಬ್ಬಂದಿಯೊಂದಿಗೆ ದೀಪಾವಳಿಯನ್ನು ಆಚರಿಸುವುದನ್ನು ಒಂದು ಸಂಪ್ರದಾಯವನ್ನಾಗಿ ಮಾಡಿಕೊಂಡಿದ್ದಾರೆ. ಇದಕ್ಕಾಗಿ ಅವರು ಸಾಮಾನ್ಯವಾಗಿ ಗಡಿ ಭಾಗದ ನೆಲೆಗಳಿಗೆ ಅಥವಾ ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದ ಪ್ರದೇಶಗಳಿಗೆ ಭೇಟಿ ನೀಡುತ್ತಾರೆ. ಕಳೆದ ವರ್ಷ, ಅವರು ಗೋವಾದಲ್ಲಿ 'ಐಎನ್‌ಎಸ್ ವಿಕ್ರಾಂತ್' ನೌಕೆಯಲ್ಲಿ ಸಶಸ್ತ್ರ ಪಡೆಗಳ ಸಿಬ್ಬಂದಿಯೊಂದಿಗೆ ದೀಪಾವಳಿ ಹಬ್ಬವನ್ನು ಆಚರಿಸಿದ್ದರು.

ನರಕ ಚತುರ್ದಶಿ ಅಂಗವಾಗಿ ಮಂತ್ರಾಲಯ ಮಠದಲ್ಲಿ ವಿಶೇಷ ಪೂಜೆ: ಭಕ್ತಿಭಾವದಿಂದ ನೆರವೇರಿದ ಧಾರ್ಮಿಕ ವಿಧಿವಿಧಾನಗಳು

ಮಂತ್ರಾಲಯ

ನರಕ ಚತುರ್ದಶಿ ಹಬ್ಬದ ಹಿನ್ನೆಲೆಯಲ್ಲಿ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ವಿವಿಧ ಧಾರ್ಮಿಕ ಹಾಗೂ ಸಾಂಪ್ರದಾಯಿಕ ಪೂಜಾ ಕಾರ್ಯಕ್ರಮಗಳು ಅತ್ಯಂತ ಶ್ರದ್ಧಾಭಕ್ತಿಯಿಂದ ನೆರವೇರಿದವು.

ಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ ದಿವ್ಯ ಸಾನ್ನಿಧ್ಯದಲ್ಲಿ ಆರಾಧ್ಯ ದೈವ ಶ್ರೀ ಮೂಲರಾಮದೇವರಿಗೆ ವಿಶೇಷ ಪೂಜೆ ಸಲ್ಲಿಸಿ, ಕಾರ್ತಿಕ ಮಂಗಳಾರತಿ ಬೆಳಗಲಾಯಿತು. ಬಳಿಕ ಗೋಮಾತೆಗೆ ಪೂಜೆ ಸಲ್ಲಿಸುವುದರೊಂದಿಗೆ ತುಳಸಿ ಪೂಜೆಯನ್ನೂ ನೆರವೇರಿಸಿ,



ಸಕಲರ ಒಳಿತಿಗಾಗಿ ಪ್ರಾರ್ಥನೆ ಸಲ್ಲಿಸಲಾಯಿತು.

ನಂತರ ಶ್ರೀಮಠದ ಆವರಣದಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿಗಳ ಪವಿತ್ರ ಮೂಲ ಬೃಂದಾವನ ಸೇರಿದಂತೆ ಇತರ ಯತಿಗಳ ಬೃಂದಾವನಗಳಿಗೆ ಶ್ರೀ ಸುಬುಧೇಂದ್ರ ತೀರ್ಥರು ಶಾಸ್ತ್ರೋಕ್ತವಾಗಿ ತೈಲಾಭ್ಯಂಜನ ಸೇವೆ ಸಮರ್ಪಿಸಿದರು. ನರಕ ಚತುರ್ದಶಿಯ ಧಾರ್ಮಿಕ ಪರಂಪರೆಯ ಭಾಗವಾಗಿ ನಾರೀಕೃತ ನೀರಾಜನಂ ವಿಧಿಯನ್ನೂ ಸಂಪ್ರದಾಯದಂತೆ ಆಚರಿಸಲಾಯಿತು.

ಪೂಜಾ ಕೈಂಕರ್ಯಗಳ ಬಳಿಕ ನೆರೆದಿದ್ದ ಭಕ್ತರನ್ನು ಉದ್ದೇಶಿಸಿ ಅನುಗ್ರಹ ಸಂದೇಶ ನೀಡಿದ ಶ್ರೀಗಳು, ನರಕ ಚತುರ್ದಶಿಯ ಶುಭ ಸಂದರ್ಭದಲ್ಲಿ ಭಕ್ತರಿಗೆ ಆಶೀರ್ವಚನ ನೀಡಿದರು.

ಶ್ರೀಮಠದಲ್ಲಿ ನಡೆದ ವಿಶೇಷ ಪೂಜೆ, ಮಂಗಳಾರತಿ ಹಾಗೂ ವಿವಿಧ ಧಾರ್ಮಿಕ ಆಚರಣೆಗಳಲ್ಲಿ ಅಪಾರ ಸಂಖ್ಯೆಯ ಭಕ್ತರು ಭಾಗವಹಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ಹಾಗೂ ಶ್ರೀ ಮೂಲರಾಮದೇವರ ದರ್ಶನ ಪಡೆದು ಕೃತಾರ್ಥರಾದರು. ಇಡೀ ಮಠದ ಪರಿಸರದಲ್ಲಿ ಭಕ್ತಿ, ಆಧ್ಯಾತ್ಮ ಮತ್ತು ಧಾರ್ಮಿಕ ಸಂಭ್ರಮ ಮನೆಮಾಡಿತ್ತು.

ನ.14 ರಿಂದ ಎರಡು ದಿನಗಳ ವಿಶೇಷ ಕಾರ್ಯಾಗಾರ

ರಾಯಚೂರು, ನ. 8-

ಅಶ್ವಮೇಧ ಫೌಂಡೇಶನ್ ವತಿಯಿಂದ ರಾಷ್ಟ್ರೀಯ ಅರ್ಹತಾ ಪರೀಕ್ಷೆ 2026ರ ಪತ್ರಿಕೆ-1ರ ಸಾಮಾನ್ಯ ಅಧ್ಯಯನ ವಿಷಯಕ್ಕೆ ಸಂಬಂಧಿಸಿದಂತೆ ಎರಡು ದಿನಗಳ ವಿಶೇಷ ಕಾರ್ಯಾಗಾರವನ್ನು ನವೆಂಬರ್ 14 ಮತ್ತು 15ರಂದು ನಗರದ ಅಂಬೇಡ್ಕರ್ ವೃತ್ತದ ಸಮೀಪವಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಫೌಂಡೇಶನ್ ಅಧ್ಯಕ್ಷ ರಮೇಶ ಉಪ್ಪಾಳ ತಿಳಿಸಿದರು.



ಅವರಿಂದು ನಗರದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಯುಜಿಸಿ-ನೆಟ್ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿರುವ ಅಭ್ಯರ್ಥಿಗಳಿಗೆ ಅನುಕೂಲವಾಗುವ ಉದ್ದೇಶದಿಂದ ಈ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಎರಡು ದಿನಗಳ ಕಾರ್ಯಾಗಾರದಲ್ಲಿ ಅನುಭವಿ ಸಂಪನ್ಮೂಲ ವ್ಯಕ್ತಿ, ಗೌರಿಬಿದನೂರು ಕೇಂದ್ರೀಯ ವಿದ್ಯಾಲಯದ ಗ್ರಂಥಪಾಲಕ ಹನುಮಂತ ನಾಯಕ (M.A., NET, MLISc., JRF/NET, K-SET, Ph.D.) ಅವರು ಪತ್ರಿಕೆ-1ರ ಸಾಮಾನ್ಯ ಅಧ್ಯಯನ ವಿಷಯಗಳ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಭಾಗವಹಿಸಲು ಪ್ರತಿ ಅಭ್ಯರ್ಥಿಗೆ 150 ನೋಂದಣಿ ಶುಲ್ಕ ನಿಗದಿಪಡಿಸಲಾಗಿದೆ. ಸ್ನಾತಕೋತ್ತರ ಪದವಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಹಾಗೂ ಪದವಿ ಪೂರ್ಣಗೊಳಿಸಿ ಸಹಾಯಕ ಪ್ರಾಧ್ಯಾಪಕರಾಗಲು ಆಸಕ್ತಿ ಹೊಂದಿರುವ ಅಭ್ಯರ್ಥಿಗಳು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಯುಜಿಸಿ-ನೆಟ್ ಅರ್ಹತೆ ಪಡೆಯುವುದರಿಂದ ವಿಶ್ವವಿದ್ಯಾಲಯ ಹಾಗೂ ಪದವಿ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರಾಗಲು ಅರ್ಹತೆ ಪಡೆಯುವುದರ ಜತೆಗೆ, ಪಿಎಚ್.ಡಿ. ಪ್ರವೇಶ ಮತ್ತು ಜೂನಿಯರ್ ರಿಸರ್ಚ್ ಫೆಲೋಶಿಪ್ ಪಡೆಯಲು ಸಹ ಅವಕಾಶವಿದೆ. ಆದ್ದರಿಂದ ಅಭ್ಯರ್ಥಿಗಳು ಕಾರ್ಯಾಗಾರದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಪರೀಕ್ಷೆಯ ಸಿದ್ಧತೆಗೆ ಅಗತ್ಯವಾದ ಜ್ಞಾನ ಮತ್ತು ಮಾರ್ಗದರ್ಶನ ಪಡೆದುಕೊಳ್ಳಬೇಕು. ಈ ಭಾಗದ ಹೆಚ್ಚಿನ ಅಭ್ಯರ್ಥಿಗಳು ಯುಜಿಸಿ-ನೆಟ್ ಪರೀಕ್ಷೆಯಲ್ಲಿ ಅರ್ಹತೆ ಪಡೆಯುವಂತಾಗಬೇಕು ಎಂಬುದು ಫೌಂಡೇಶನ್‌ನ ಉದ್ದೇಶವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಫೌಂಡೇಶನ್ ಉಪಾಧ್ಯಕ್ಷ ಕೆ. ಮೌಲಪ್ಪ, ಪ್ರಧಾನ ಕಾರ್ಯದರ್ಶಿ ಉರುಕುಂದ, ಖಜಾಂಚಿ ಅನಂತರಡ್ಡಿ, ಅಂಜಿಬಾಬು, ಜಾನ್ಸನ್ ಹಾಗೂ ಟೀಕಪ್ಪ ಉಪಸ್ಥಿತರಿದ್ದರು.

ರೈಲ್ವೆ ನಿಲ್ದಾಣದಲ್ಲಿ 48 ಲೀಟರ್ ಕಲಬೆರಕೆ ಸೇಂದಿ ವಶ : ವ್ಯಕ್ತಿ ಬಂಧನ



ರಾಯಚೂರು

ನಗರದ ರೈಲ್ವೆ ನಿಲ್ದಾಣದಲ್ಲಿ ಅಕ್ರಮವಾಗಿ 48 ಲೀಟರ್ ಕಲಬೆರಕೆ ಸೇಂದಿ ಸಾಗಾಟ ಮಾಡುತ್ತಿದ್ದ ವ್ಯಕ್ತಿಯನ್ನು ಅಬಕಾರಿ ಇಲಾಖೆ ಅಧಿಕಾರಿಗಳು ಪತ್ತೆಹಚ್ಚಿ ವಶಕ್ಕೆ ಪಡೆದಿದ್ದಾರೆ.

ಅಬಕಾರಿ ಅಪರ ಆಯುಕ್ತರು (ಜಾರಿ ಮತ್ತು ಅಪರಾಧ), ಬೆಳಗಾವಿ ಕೇಂದ್ರ ಸ್ಥಾನದ ಆದೇಶ ಹಾಗೂ ಕಲಬುರಗಿ ವಿಭಾಗದ ಅಬಕಾರಿ ಜಂಟಿ ಆಯುಕ್ತರು, ರಾಯಚೂರು ಜಿಲ್ಲಾ ಅಬಕಾರಿ ಉಪ ಆಯುಕ್ತರು ಮತ್ತು ಉಪ ವಿಭಾಗದ ಅಬಕಾರಿ ಉಪ ಅಧೀಕ್ಷಕರ ಮಾರ್ಗದರ್ಶನದಲ್ಲಿ ಶುಕ್ರವಾರ ಅಬಕಾರಿ ಸಿಬ್ಬಂದಿ ರೈಲ್ವೆ ನಿಲ್ದಾಣದಲ್ಲಿ ತಪಾಸಣೆ ನಡೆಸುತ್ತಿದ್ದರು.

ಈ ಸಂದರ್ಭದಲ್ಲಿ ಮಧ್ಯಾಹ್ನ 1.20ರ ಸುಮಾರಿಗೆ 48 ಲೀಟರ್ ಕಲಬೆರಕೆ ಸೇಂದಿಯನ್ನು ಸಾಗಿಸುತ್ತಿದ್ದ ಮಂಗಳವಾರಪೇಟೆಯ ಜಂಬಣ್ಣ ಎಂಬಾತನನ್ನು ಪತ್ತೆಹಚ್ಚಿದ್ದಾರೆ.ಈ ಸಂಬಂಧ ಆರೋಪಿಯ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 11, 14 ಮತ್ತು 15ರ ಉಲ್ಲಂಘನೆ ಹಿನ್ನೆಲೆಯಲ್ಲಿ ಕಲಂ 32(1), 34 ಹಾಗೂ 38(ಎ) ಅಡಿಯಲ್ಲಿ ದಂಡನೀಯ ಪ್ರಕರಣ ದಾಖಲಿಸಲಾಗಿದೆ. ಅಬಕಾರಿ ಉಪ ನಿರೀಕ್ಷಕರು ಪ್ರಕರಣ ಸಂಖ್ಯೆ 39/202627ರ ಅಡಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

ದಲಿತರ ಮೇಲೆ ದೌರ್ಜನ್ಯ ಖಂಡಿಸಿ ತಿಡಿಗೋಳ ಚಲೋ ಬೃಹತ್ ಬೈಕ್ ರ್‍ಯಾಲಿ

ಸಿಂಧನೂರು : ತಾಲ್ಲೂಕಿನ ತಿಡಿಗೋಳ ಗ್ರಾಮದ ದಲಿತರ ಮೇಲೆ ದೌರ್ಜನ್ಯ ನಡೆಸಿ, ಸಾಮಾಜಿಕ ಬಹಿಷ್ಕಾರ ಹಾಕಿದವರ ಮೇಲೆ



ಕಾನೂನು ಕ್ರಮಕ್ಕೆ ಆಗ್ರಹಿಸಿ ರವಿವಾರ ಸಾವಿರಾರು ಸಂಖ್ಯೆಯಲ್ಲಿ ದಲಿತ ಮುಖಂಡರು 'ತಿಡಿಗೋಳ ಚಲೋ' ಬೃಹತ್ ಬೈಕ್ ರ್‍ಯಾಲಿ ನಡೆಸಿ, ತಮ್ಮ ಆಕ್ರೋಶ ಹೊರಹಾಕಿದರು.

ಬೆಳಗ್ಗೆಯೇ ನಗರದ ಪಿಡಬ್ಲ್ಯೂಡಿ ಕ್ಯಾಂಪಿನ ಅಂಬೇಡ್ಕರ್ ವೃತ್ತದ ಬಳಿ ಸಾವಿರಾರು ಸಂಖ್ಯೆಯಲ್ಲಿ ಜಮಾವಣೆಗೊಂಡ ದಲಿತ ಮುಖಂಡರು ಮಧ್ಯಾಹ್ನದವರೆಗೆ ಬಹಿರಂಗ ಸಭೆ ನಡೆಸಿ, ತಮ್ಮ ವಿವಿಧ ಬೇಡಿಕೆಗಳನ್ನು ಮಂಡಿಸಿದರು. ಸಿಂಧನೂರು ತಾಲ್ಲೂಕು ಸೇರಿದಂತೆ ಜಿಲ್ಲೆ, ರಾಜ್ಯದಲ್ಲಿ ದಲಿತರ ಮೇಲಿನ ನಡೆದಿರುವ ದೌರ್ಜನ್ಯಗಳ ವಿರುದ್ಧ ಆಕ್ರೋಶ ಹೊರಹಾಕಿದರು.

ಬಹಿರಂಗ ಸಭೆಯಲ್ಲಿ ದಲಿತ ಮುಖಂಡರಾದ ಡಾ.ಎನ್. ಮೂರ್ತಿ, ರವೀಂದ್ರ ಪಟ್ಟಿ, ಅಲ್ಲಮಪ್ರಭು ಬೆಟದೂರು, ಎಸ್. ಮಾರೆಪ್ಪ, ಅಂಬಣ್ಣ ಅರೋಲಿಕರ, ಡಿ. ಎಚ್. ಪೂಜಾರ, ಮೋಹನ ರಾಜ್, ದಾನಪ್ಪ ಮಸ್ಕಿ, ಕರಿಯಪ್ಪ ದೊರೆ, ಕ್ಲಿಫ್ಟನ್ ಡಿ' ರೊಜಾರಿಯೋ, ಬಸವ ಹರಳಯ್ಯ ಸ್ವಾಮಿ ಹರಳಯ್ಯ ಪೀಠ ಚಿತ್ರದುರ್ಗ, ಬಸವರಾಜ್ ಕಳಸ ಸೇರಿದಂತೆ ಸಾವಿರಾರು ಸಂಖ್ಯೆಯಲ್ಲಿ ದಲಿತ ಮುಖಂಡರು ಭಾಗವಹಿಸಿದ್ದರು.

ಮಧ್ಯಾಹ್ನದೊತ್ತಿಗೆ ಆರಂಭವಾದ ಬೃಹತ್ ಬೈಕ್ ರ್‍ಯಾಲಿಯು ನಗರದ ಬಪ್ಪೂರ ರಸ್ತೆಯ ವರಗೆ ಸಾಗಿತು. ಅಂಬೇಡ್ಕರ್ ಭಾವಚಿತ್ರ, ನೀಲಿ ಬಣ್ಣದ ಬಾವುಟಗಳು ನಗರದಾದ್ಯಂತ ರಾರಾಜಿಸಿದವು.

ಪ್ರತಿಭಟನೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆ ಬಿಗಿ ಭದ್ರತೆ ವಹಿಸಿತ್ತು. 4 ಡಿವೈಎಸ್ಪಿ, 8 ಸಿಪಿಐ, 13 ಪಿಎಸ್ ಐ ಸೇರಿ 100 ಕ್ಕೂ ಅಧಿಕ ಪೊಲೀಸರು ಕಟ್ಟೆಚ್ಚರವಹಿಸಿದ್ದರು.

5 ಕಿ.ಮೀ. ನಿಷೇದಾಜ್ಞೆ ಜಾರಿ

ತಿಡಿಗೋಳ ಗ್ರಾಮದ ದಲಿತರ ಮೇಲಿನ ದೌರ್ಜನ್ಯ ಖಂಡಿಸಿ ನಡೆದಿದ್ದ ತಿಡಿಗೋಳ ಚಲೋ ಬೃಹತ್ ಬೈಕ್ ರ್‍ಯಾಲಿ ಹಿನ್ನಲೆ ಸಿಂಧನೂರು ತಹಸೀಲ್ದಾರ ಅರುಣ್ ಹೆಚ್.ದೇಸಾಯಿ ಅವರು ತಿಡಿಗೋಳ ಗ್ರಾಮ ಹಾಗೂ ತಿಡಿಗೋಳ ಸುತ್ತಮುತ್ತ 5 ಕಿ.ಮೀ. ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಕಲಂ 163ರ ಅಡಿ ನಿಷೇದಾಜ್ಞೆ ಜಾರಿಗೊಳಿಸಿ ಆದೇಶ ಮಾಡಿದ್ದಾರೆ.

ಕತಾರ್ ಕನ್ನಡ ಸಮ್ಮಾನ್ ಪ್ರಶಸ್ತಿ ಸ್ವೀಕರಿಸಿ ಭಾವುಕರಾದ ಡಾ. ಉಮಾಶ್ರೀ

ಪರದೇಶದಲ್ಲೂ ಕನ್ನಡವನ್ನು ಉಳಿಸಿರುವುದು ನಿಜವಾದ ದೇಶಪ್ರೇಮ -ಉಪಸಭಾಪತಿ ಡಾ. ಉಮಾಶ್ರೀ

ದೋಹಾ (ಕತಾರ್): ನೀವು ಕತಾರ್ ನಂತಹ ಪರದೇಶದಲ್ಲಿದ್ದರೂ, ಕನ್ನಡದ ಮನಸ್ಸು ಹೊಂದಿದ್ದೀರಿ. ನೀವು ಇರುವವರೆಗೂ ಕನ್ನಡ ಎಂದಿಗೂ ಸಾಯುವುದಿಲ್ಲ. ಕನ್ನಡ ಉಳಿಯುತ್ತದೆ, ಕನ್ನಡ ಬೆಳೆಯುತ್ತದೆ ಎಂದು ಕರ್ನಾಟಕ ವಿ'ಧಾ'ನ'ಪ'ರಿ'ಷ'ತ್ತಿ'ನ' ಉಪಸಭಾಪತಿಗಳು ಹಾಗೂ ಹಿರಿಯ ಕಲಾವಿದರೂ ಆದ ಡಾ. ಉಮಾಶ್ರೀ ಅವರು ಹೇಳಿದ್ದಾರೆ.

ಕತಾರ್ ಕರ್ನಾಟಕ ಸಂಘ ಆಯೋಜಿಸಿದ್ದ 71ನೇ ಕರ್ನಾಟಕ ರಾಜ್ಯೋತ್ಸವ ಸಂಭ್ರಮ ಕರುನಾಡ ವೈಭವ-2026 ಅದ್ದೂರಿ ಸಮಾರಂಭದಲ್ಲಿ ಕೊಡಮಾಡಿದ ಪ್ರತಿಷ್ಠಿತ ಕತಾರ್ ಕನ್ನಡ ಸಮ್ಮಾನ್



ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಡಾ. ಉಮಾಶ್ರೀ ಅವರು, ಕತಾರ್ ನಾಡಿನಲ್ಲಿ ಕನ್ನಡದ ಹೆಮ್ಮೆಯ ಪುತ್ರರೆಲ್ಲರೂ ಸೇರಿ ಕರುನಾಡ ವೈಭವ ಎನ್ನುವಂತಹ ಶೀರ್ಷಿಕೆಯಡಿಯಲ್ಲಿ ಕನ್ನಡ ತಾಯಿ ಭುವನೇಶ್ವರಿಯನ್ನು ಸ್ಮರಿಸುವ, ಆರಾಧಿಸುವ ಮೂಲಕ ಕನ್ನಡಿಗರನ್ನೆಲ್ಲರನ್ನೂ ಇಲ್ಲಿ ಒಗ್ಗೂಡಿಸಿ, ಕಲಾ ಸಾಂಸ್ಕೃತಿಕ ರ'ಸ'ದ'ೌ'ತ'ಣ'ವ'ನ'್ನ ಉಣಬಡಿಸುತ್ತಿರುವುದು ಅತ್ಯಂತ ಸಂತೋಷ ತರುವಂತಹದ್ದು ಎಂದರು.

ಸನ್ಮಾನದ ಸರ್ವಶ್ರೇಷ್ಠತೆ ಕನ್ನಡಿಗರಿಗೆ ಸಲ್ಲಿಕೆ

ಕರುನಾಡಿನಲ್ಲಿ ನಿಮ್ಮ ಈ ಕನ್ನಡತಿ, ಏನಾದರೂ ಒಂದಿಷ್ಟು ಕೆಲಸಗಳನ್ನು ಮಾಡಿದ್ದರೆ, ಸಾಧಿಸಿದ್ದರೆ, ಅದು ನಿಮ್ಮೆಲ್ಲರ, ರಾಜ್ಯದ ಜನರ ಹಿತಕರವಾದ ಆಶೀರ್ವಾದದಿಂದ ಈ ಸಾಧನೆಯನ್ನು ಮಾಡುವುದಕ್ಕೆ ಸಾಧ್ಯವಾಗಿದೆ. ಇದು ನನ್ನಿಂದ ಆದದ್ದಲ್ಲ; ಎಲ್ಲರಿಂದಲೂ ಆಗಿರುವಂತಹದ್ದು. ಎಲ್ಲ ಪ್ರೇಕ್ಷಕರ ಚಪ್ಪಾಳೆ, ಶಿಳ್ಳೆ, ಪ್ರೋತ್ಸಾಹ, ರಾಜಕೀಯದಲ್ಲಿ ಪ್ರೋತ್ಸಾಹ ಹೀಗೆ ಪ್ರತಿ ಹಂತದಲ್ಲೂ ಸಾರ್ವಜನಿಕರು, ಮತದಾರರು ಇಲ್ಲದೆ ಬೆಳೆಯುವುದಕ್ಕೆ ಸಾಧ್ಯವಿಲ್ಲ. ವಿಶೇಷವಾಗಿ ನನ್ನ ಕುಟುಂಬವು ಸಹ. ಹಾಗಾಗಿ, ಈ ಸಾಧನೆಯ, ಈ ಸನ್ಮಾನದ ಸರ್ವಶ್ರೇಷ್ಠತೆಯೂ ನಿಮ್ಮೆಲ್ಲರಿಗೂ ಸಲ್ಲತಕ್ಕದ್ದು ಎಂದು ಭಾವುಕರಾಗಿ ನುಡಿದರು.

ಕನ್ನಡ ಉಳಿಸುವ ಪ್ರಯತ್ನ ಅಸಾಧಾರಣ

ಕತಾರ್ ಕನ್ನಡಿಗರ ಕನ್ನಡದ ಪ್ರೇಮ, ಕನ್ನಡದ ಪ್ರೀತಿ ಅತಿಹೆಚ್ಚು ಎದ್ದು ಕಾಣುತ್ತಿರುವುದು ನನಗೆ ಖುಷಿ ನೀಡಿತು. ಮಕ್ಕಳಿಗೆ ಕನ್ನಡವನ್ನು ಕಲಿಸುತ್ತಿರುವುದು ಬಹಳ ಮುಖ್ಯವಾದುದ್ದು. ನಮ್ಮ ಕನ್ನಡಿಗರ ಮಕ್ಕಳು ಎಲ್ಲೇ ಇರಲಿ; ಕರ್ನಾಟಕದಲ್ಲೇ ಇದ್ದರೂ ಕನ್ನಡದ ಬಗ್ಗೆ ಮಾತನಾಡಿ, ಕನ್ನಡವನ್ನು

3ನೇ ಪುಟಕ್ಕೆ

ನ.12ರಂದು ರಾಯಚೂರಿನಲ್ಲಿ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆ



ರಾಯಚೂರು: ರಾಜ್ಯ ಬಾಲಭವನ ಸೊಸೈಟಿ, ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಜಂಟಿ ಆಶ್ರಯದಲ್ಲಿ ಜಿಲ್ಲಾ ಬಾಲಭವನ ಸೊಸೈಟಿ ವತಿಯಿಂದ ನವೆಂಬರ್ 12ರಂದು ಮಕ್ಕಳ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ ಕಾರ್ಯಕ್ರಮ ನಡೆಯಲಿದೆ. 9ರಿಂದ 16 ವರ್ಷದೊಳಗಿನ ಸರ್ಕಾರಿ ಹಾಗೂ ಖಾಸಗಿ ಶಾಲೆಗಳ ಮಕ್ಕಳು, ಗ್ರಾಮೀಣ ಪ್ರದೇಶದ ಮಕ್ಕಳು, ಸೌಲಭ್ಯ ವಂಚಿತ ಮಕ್ಕಳು, ವಿಶೇಷ ಚೇತನ ಮಕ್ಕಳು, ಬಾಲಕ'-ಬಾಲಕಿಯರ' ಬಾಲಮಂದಿರದ ಮಕ್ಕಳು ಹಾಗೂ ಸರ್ಕಾರಿ ಸುಧಾರಣಾ ಸಂಸ್ಥೆಯ ಮಕ್ಕಳಿಗೆ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಲು ಮೊದಲ ಆದ್ಯತೆಯ ಮೇರೆಗೆ ಅವಕಾಶ ಕಲ್ಪಿಸಲಾಗಿದೆ.

ಕಾರ್ಯಕ್ರಮದಲ್ಲಿ ಸೃಜನಾತ್ಮಕ ಕಲೆಗಳ ವಿಭಾಗದಲ್ಲಿ ಚಿತ್ರಕಲೆ, ಕರಕುಶಲ ಕಲೆ ಹಾಗೂ ಜೇಡಿಮಣ್ಣಿನ ಕಲೆ ಸ್ಪರ್ಧೆಗಳು ನಡೆಯಲಿವೆ. ಸೃಜನಾತ್ಮಕ ಬರವಣಿಗೆಯಲ್ಲಿ ಕಥೆ, ಕವನ ಹಾಗೂ ಪ್ರಬಂಧ ಸ್ಪರ್ಧೆಗಳನ್ನು

3ನೇ ಪುಟಕ್ಕೆ

ಬೆಳೆ ವಿಮೆ ಪರಿಹಾರ ನೀಡಲು ವಿಳಂಬ ಮಾಡಿದರೆ ಕಠಿಣ ಕ್ರಮ: ಸಚಿವ ಈಶ್ವರ್ ಖಂಡ್ರೆ ಎಚ್ಚರಿಕೆ



ಬೀದರ್,

ಜಿಲ್ಲೆಯಲ್ಲಿ ಎದುರಾಗಿರುವ ತೀವ್ರ ಬರಗಾಲದಿಂದಾಗಿ ಹೆಸರು, ಉದ್ದು, ಸೋಯಾ ಹಾಗೂ ತೊಗರಿ ಬೆಳೆಗಳು ಸಂಪೂರ್ಣ ಹಾನಿಗೊಳಗಾಗಿದ್ದು, ಸಂಕಷ್ಟದಲ್ಲಿರುವ ಅರ್ಹ ರೈತರಿಗೆ ತಕ್ಷಣವೇ ಬೆಳೆ ವಿಮೆ ಪರಿಹಾರ ಜಮೆ ಮಾಡುವಂತೆ ವಿಮಾ ಕಂಪನಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಲಾಗಿದೆ. ರೈತರ ಹಿತಾಸಕ್ತಿ ರಕ್ಷಣೆಯಲ್ಲಿ ಯಾವುದೇ ರಾಜಿ ಇಲ್ಲ. ಪರಿಹಾರ ನೀಡಲು ವಿಳಂಬ ಅಥವಾ ನಿರ್ಲಕ್ಷ್ಯ ವಹಿಸಿದರೆ ಸಂಬಂಧಪಟ್ಟ ಕಂಪನಿಗಳ ವಿರುದ್ಧ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ (ಕೆಡಿಪಿ) ಸಭೆಯ ಅಧ್ಯಕ್ಷತೆ ವಹಿಸಿ, ವಿವಿಧ ಇಲಾಖೆಗಳ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಯಾವುದೇ ರೀತಿಯ ಕುಡಿಯುವ ನೀರಿನ ಸಮಸ್ಯೆ ಎದುರಾದರೆ 24 ಗಂಟೆಯೊಳಗೆ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಬರಗಾಲ ಎದುರಿಸಲು ಜಿಲ್ಲೆಗೆ ಈಗಾಗಲೇ 10 ಕೋಟಿ ರೂ. ಅನುದಾನ ನೀಡಲಾಗಿದೆ ಎಂದು ತಿಳಿಸಿದರು.

ಗ್ರಾಮ ಹಾಗೂ ನಗರ ಪ್ರದೇಶಗಳಲ್ಲಿ ನೀರಿನ ತೊಂದರೆ ಕಂಡುಬಂದ ತಕ್ಷಣ ಟ್ಯಾಂಕರ್‌ಗಳ ಮೂಲಕ, ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆದು ಅಥವಾ ಹೊಸ ಬೋರ್‌ವೆಲ್‌ಗಳನ್ನು ಕೊರೆಸುವ ಮೂಲಕ ಸಾರ್ವಜನಿಕರಿಗೆ ತಕ್ಷಣ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು. ಮುಂಗಾರು ಮಳೆಯ ವೈಫಲ್ಯದಿಂದ ಎದುರಾಗಿರುವ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದರು.

ಜಿಲ್ಲೆಯ ರೈತರಿಗೆ ದಿನಕ್ಕೆ ಏಳು ಗಂಟೆಗಳ ಕಾಲ ಸಮರ್ಪಕವಾಗಿ ವಿದ್ಯುತ್ ಪೂರೈಸಬೇಕು. ಯಾವುದೇ ಲೈನ್‌ಮನ್ ಬೇರೆಯವರಿಂದ ವಿದ್ಯುತ್ ಕಂಬ ಹತ್ತಿಸುವಂತಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. ಬಾಗಿದ ಕಂಬಗಳು ಹಾಗೂ ಜೋತುಬಿದ್ದ ವಿದ್ಯುತ್ ತಂತಿಗಳನ್ನು ಸರಿಪಡಿಸಲು ಕ್ರಮ ಕೈಗೊಳ್ಳಬೇಕು. ವಿದ್ಯುತ್ ತಗುಲಿ ಮೃತಪಟ್ಟವರ ಕುಟುಂಬಗಳಿಗೆ ಪರಿಹಾರ ಒದಗಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಪಾಲ್ಗೊಂಡಿದ್ದ ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಶೈಲೇಂದ್ರ ಬೆಲ್ದಾಳೆ ಮಾತನಾಡಿ, ತಮ್ಮ ಕ್ಷೇತ್ರದ ರೈತರು ಮೇವಿನ ಕೊರತೆ ಎದುರಿಸುತ್ತಿದ್ದಾರೆ. ಪಶುವೈದ್ಯಕೀಯ ಆಸ್ಪತ್ರೆಗಳಲ್ಲಿ ಔಷಧಗಳು ಲಭ್ಯವಾಗುತ್ತಿಲ್ಲ. ತಮ್ಮ ಕ್ಷೇತ್ರದ ಒಂಬತ್ತು ಹಳ್ಳಿಗಳು ಮಹಾನಗರ ಪಾಲಿಕೆ ವ್ಯಾಪ್ತಿಗೆ ಬಂದಿದ್ದರೂ ಅಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಬಗದಲ್ ಸೇತುವೆ ಶಿಥಿಲಗೊಂಡಿದೆ. ಮಾಂಜಾ ದಾರದಿಂದ ಮೃತಪಟ್ಟ ವ್ಯಕ್ತಿಯ ಕುಟುಂಬಕ್ಕೆ ಹೆಚ್ಚಿನ ಪರಿಹಾರ ನೀಡಬೇಕು. ಬ್ರಿಮ್ಸ್ ನಲ್ಲಿರುವ ಕ್ಯಾತ್ ಲ್ಯಾಬ್ ಆರಂಭಿಸಬೇಕು. ಬಸ್ ಸಂಚಾರದ ಸಮಸ್ಯೆ ಸೇರಿದಂತೆ ಹಲವು ವಿಷಯಗಳನ್ನು ಸಚಿವರ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಚಂದ್ರಶೇಖರ್ ಪಾಟೀಲ್ ಮಾತನಾಡಿ, ರೈತರ ಜೀವನಾಡಿಯಾದ ಬಿಎಸ್‌ಎಸ್‌ಕೆ ಕಾರ್ಖಾನೆಯನ್ನು ಪುನರಾರಂಭಿಸಬೇಕು. ಹುಮನಾಬಾದ್‌ನಲ್ಲಿರುವ ಹಲವು ರಾಸಾಯನಿಕ ಕಾರ್ಖಾನೆಗಳಿಂದ ಜನರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಉಂಟಾಗುತ್ತಿದೆ. ಆದ್ದರಿಂದ ಅವುಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ತಮ್ಮ ತಾಲೂಕಿನಲ್ಲಿ ಒಬ್ಬ ಗುತ್ತಿಗೆದಾರನಿಗೆ 150 ಕೋಟಿ ರೂ. ಮೊತ್ತದ ಕಾಮಗಾರಿಗಳ ಟೆಂಡರ್ ನೀಡಲಾಗಿದೆ. ಆದರೆ, ಆ ಗುತ್ತಿಗೆದಾರ ಎಲ್ಲಿಯೂ ಕಾಮಗಾರಿ ಪೂರ್ಣಗೊಳಿಸಿಲ್ಲ. ಆದರೂ ಮತ್ತೆ ಆತನಿಗೆ ಟೆಂಡರ್ ನೀಡಲಾಗುತ್ತಿದೆ ಎಂದು ಆರೋಪಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ರಾಸಾಯನಿಕ ಕಂಪನಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಹಾಗೂ ಪಿಜಿಆರ್ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರ ವಿರುದ್ಧ ಎಫ್‌ಐಆರ್ ದಾಖಲಿಸಬೇಕು ಎಂದು ಸೂಚಿಸಿದರು. ಕಾಮಗಾರಿ ಪೂರ್ಣಗೊಳ್ಳುವವರೆಗೆ ಗುತ್ತಿಗೆದಾರನ ಬಿಲ್ ಪಾವತಿಸಬಾರದು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಬಿಎಸ್‌ಎಸ್‌ಕೆ ಕಾರ್ಖಾನೆಯ ಪುನರಾರಂಭಕ್ಕೂ ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ಸಂಸದ ಸಾಗರ ಖಂಡ್ರೆ ಮಾತನಾಡಿ, ರಾಷ್ಟ್ರೀಯ ಹೆದ್ದಾರಿಯಲ್ಲಿರುವ ಸೇತುವೆಗಳ ಬಳಿ ಬೆಳಕಿನ ವ್ಯವಸ್ಥೆ ಇಲ್ಲದ ಕಾರಣ ಅಪಘಾತಗಳು ಸಂಭವಿಸುತ್ತಿವೆ. ಮನ್ನಾಖೇಳಿಯಲ್ಲಿ ಸ್ಥಳೀಯ ಸಂಸ್ಥೆಯಿಂದ ನಿರ್ಮಿಸಲಾದ ಅಂಗಡಿಗಳನ್ನು ಸಮರ್ಪಕವಾಗಿ ಹಂಚಿಕೆ ಮಾಡಿಲ್ಲ ಎಂದು ಆರೋಪಿಸಿ, ಹಲವು ಸಮಸ್ಯೆಗಳನ್ನು ಸಚಿವರ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಎಲ್ಲ ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಅಪಘಾತ ತಡೆಗೆ ಕೈಗೊಳ್ಳಬಹುದಾದ ಕ್ರಮಗಳ ಕುರಿತು ವರದಿ ನೀಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ಹಾಗೂ ಮನ್ನಾಖೇಳಿಯಲ್ಲಿನ ಅಕ್ರಮದ ಕುರಿತು ತನಿಖೆ ನಡೆಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಶಾಸಕ ಪ್ರಭು ಚವ್ಹಾಣ ಮಾತನಾಡಿ, ಔರಾದ್ ಪುರಸಭೆಯಲ್ಲಿ ಖಾಯಂ ಅಧಿಕಾರಿ ಇಲ್ಲದ ಕಾರಣ ಕೆಲಸ ಕಾರ್ಯಗಳು ಮಂದಗತಿಯಲ್ಲಿ ಸಾಗುತ್ತಿವೆ. ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ ಕಾಡುತ್ತಿದ್ದು, ಕಾರಂಜಾದಿಂದ ಕೆರೆ ತುಂಬಿಸುವ ಯೋಜನೆಯ ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿದೆ ಎಂದು ಸಚಿವರ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಸಮಸ್ಯೆಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಬೀದರ್ ಉತ್ತರ ಕ್ಷೇತ್ರದ ಶಾಸಕ ರಹೀಮ್ ಖಾನ್ ಮಾತನಾಡಿ, ಬೀದರ್ ನಗರದ ಹಲವು ಬಡಾವಣೆಗಳಲ್ಲಿ ಕುಡಿಯುವ ನೀರಿನ ಅಭಾವವಿದೆ. ಹಲವೆಡೆ ಪೈಪ್‌ಲೈನ್ ಒಡೆದು ನೀರು ಪೋಲಾಗುತ್ತಿದ್ದರೂ ಅವುಗಳ ನಿರ್ವಹಣೆಗೆ ಯಾರೂ ಇಲ್ಲದಂತಾಗಿದೆ. ನಗರದ ಹಲವು ಪ್ರದೇಶಗಳಲ್ಲಿ ಬೀದಿ ದೀಪಗಳ ವ್ಯವಸ್ಥೆಯೂ ಇಲ್ಲ ಎಂದು ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಪೈಪ್‌ಲೈನ್ ನಿರ್ವಹಣೆಯ ಜವಾಬ್ದಾರಿಯನ್ನು ಯಾರಿಗಾದರೂ ವಹಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಬೀದಿ ದೀಪಗಳ ಅವಶ್ಯಕತೆ ಇರುವ ಎಲ್ಲ ಕಡೆ ಅವುಗಳನ್ನು ಅಳವಡಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಮರ್ ಖಂಡ್ರೆ, ಬೀದರ್ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಂದೀಪ್ ಡಿ., ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠ್ಠಲರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಹಾಗೂ ಪ್ರಾದೇಶಿಕ ಅರಣ್ಯ ಸಂರಕ್ಷಣಾಧಿಕಾರಿ ಆಶಿಶ್ ರೆಡ್ಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ವಾಯು ಮಾಲಿನ್ಯ ನಿಯಂತ್ರಣ ಜಾಗೃತಿ ಮಾಸಾಚರಣೆಗೆ ಡಿಸಿ ಶಿಲ್ಪಾ ಶರ್ಮಾ ಚಾಲನೆ

ಬೀದರ್,

ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಬೀದರ್ ಹಾಗೂ ಸಹಾಯಕ ಪ್ರಾದೇಶಿಕ ಸಾರಿಗೆ ಕಚೇರಿಗಳಾದ ಭಾಲ್ಕಿ, ಬಸವಕಲ್ಯಾಣ ಮತ್ತು ಹುಮನಾಬಾದ್ ವತಿಯಿಂದ 2026ರ ನವೆಂಬರ್ ತಿಂಗಳನ್ನು ವಾಯು ಮಾಲಿನ್ಯ ನಿಯಂತ್ರಣ ಜಾಗೃತಿ ಮಾಸಾಚರಣೆಯಾಗಿ ಆಚರಿಸಲಾಗುತ್ತಿದೆ. ಈ ನಿಮಿತ್ತ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಶನಿವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಾಸಾಚರಣೆಯ ಭಿತ್ತಿಪತ್ರ ಬಿಡುಗಡೆ ಮಾಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಣ್ಣಪುಟ್ಟ ಕೆಲಸಗಳಿಗೂ ವಾಹನಗಳನ್ನು ಬಳಸುವುದನ್ನು ತಪ್ಪಿಸಬೇಕು. ವಿದ್ಯುತ್ ಚಾಲಿತ ವಾಹನಗಳು ಹಾಗೂ ಸೈಕಲ್‌ಗಳ ಬಳಕೆಗೆ ಆದ್ಯತೆ ನೀಡುವ ಮೂಲಕ ವಾಯು ಮಾಲಿನ್ಯ ತಗ್ಗಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.

ಸಾರ್ವಜನಿಕರು ಸಮೂಹ ಸಾರಿಗೆ ವ್ಯವಸ್ಥೆಯನ್ನು ಹೆಚ್ಚು ಬಳಸಿಕೊಳ್ಳಬೇಕು. ಕೇಂದ್ರ ಮೋಟಾರು ವಾಹನ ನಿಯಮಾವಳಿ-1989ರ ನಿಯಮಗಳನ್ವಯ ಎಲ್ಲ ವಾಹನಗಳನ್ನು ಪ್ರತಿ ತಿಂಗಳಿಗೊಮ್ಮೆ ವಾಯು ಮಾಲಿನ್ಯ ತಪಾಸಣೆಗೆ ಒಳಪಡಿಸಿ, ಮಾಲಿನ್ಯ ನಿಯಂತ್ರಣದಲ್ಲಿದೆ ಎಂಬ ಪ್ರಮಾಣಪತ್ರ ಪಡೆಯಬೇಕು. ವಾಯು ಮಾಲಿನ್ಯ ತಗ್ಗಿಸಲು ಪ್ರತಿಯೊಬ್ಬರೂ ಮುಂದಾಗಬೇಕು ಎಂದು ಕರೆ ನೀಡಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಮಹಮ್ಮದ್ ಜಾಫರ್ ಸಾದಿಕ್ ಮಾತನಾಡಿ, ವಾಹನಗಳ ಮಾಲಿನ್ಯವನ್ನು ನಿಯಂತ್ರಣದಲ್ಲಿ ಇಡದಿದ್ದಲ್ಲಿ ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳಿಗೆ 1,500 ರೂ. ಹಾಗೂ ಇತರೆ ವಾಹನಗಳಿಗೆ 3,000 ರೂ. ದಂಡ ವಿಧಿಸಲಾಗುತ್ತದೆ. ನಿಯಮ ಉಲ್ಲಂಘನೆ ಪುನರಾವರ್ತನೆಯಾದರೆ ಮೋಟಾರು ವಾಹನ ಕಾಯ್ದೆಯಡಿ ವಾಹನದ ನೋಂದಣಿಯನ್ನು ಅಮಾನತುಗೊಳಿಸುವುದು ಹಾಗೂ ವಾಹನವನ್ನು ವಶಕ್ಕೆ ಪಡೆಯುವಂತಹ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ನವೆಂಬರ್ 30ರವರೆಗೆ ನಡೆಯುವ ಈ ಮಾಸಾಚರಣೆಯಲ್ಲಿ ವಾಹನಗಳಿಂದ ಉಂಟಾಗುವ ವಾಯು ಮಾಲಿನ್ಯ, ಅದರ ದುಷ್ಪರಿಣಾಮಗಳು ಹಾಗೂ ನಿಯಂತ್ರಣ ಕ್ರಮಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಭಾಗ್ಯವಂತಿ ಮೋಟಾರ್ ಡ್ರೈವಿಂಗ್ ಸ್ಕೂಲ್‌ನ ಪ್ರಾಚಾರ್ಯ ಶಿವರಾಜ್ ಜಮಾದಾರ್ ಖಾಜಾಪುರ್ ಉಪಸ್ಥಿತರಿದ್ದರು.



ಸರ್ಕಾರಿ ಶಾಲೆಗಳ ವಿಲೀನ, ಮುಚ್ಚುವಿಕೆ ಕ್ರಮ ಖಂಡಿಸಿ ಎಐಡಿಎಸ್‌ಒ ಪ್ರತಿಭಟನೆ

ಕಲಬುರಗಿ:

ಸರ್ಕಾರಿ ಶಾಲೆಗಳ ವಿಲೀನ ಹಾಗೂ ಮುಚ್ಚುವಿಕೆ ಕ್ರಮವನ್ನು ಖಂಡಿಸಿ, ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯ ರಕ್ಷಣೆಗಾಗಿ ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಶನ್ (ಎಐಡಿಎಸ್‌ಒ) ನೇತೃತ್ವದಲ್ಲಿ ಶುಕ್ರವಾರ ನಗರದ ಎಸ್‌ವಿಪಿ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಮಾತನಾಡಿದ ಎಐಡಿಎಸ್‌ಒ ಕಲಬುರಗಿ ಜಿಲ್ಲಾ ಕಾರ್ಯದರ್ಶಿ ವೆಂಕಟೇಶ ದೇವದುರ್ಗ, ಕಾಂಗ್ರೆಸ್ ನಾಯಕರು ದೇಶಾದ್ಯಂತ ಪ್ರಜಾಪ್ರಭುತ್ವ ಉಳಿಸುವ ಯಾತ್ರೆ ನಡೆಸುತ್ತಿದ್ದಾರೆ. ಆದರೆ, ರಾಜ್ಯದಲ್ಲಿ ಬಡ ಮಕ್ಕಳಿಗೆ ಶಿಕ್ಷಣ ನೀಡುವ ಸರ್ಕಾರಿ ಶಾಲೆಗಳನ್ನು ಮುಚ್ಚುವ ಮೂಲಕ ಯಾವ ಪ್ರಜಾಪ್ರಭುತ್ವವನ್ನು ಉಳಿಸಲು ಹೊರಟಿದ್ದಾರೆ ಎಂದು ಪ್ರಶ್ನಿಸಿದರು.

ಸರ್ಕಾರಿ ಶಾಲೆಗಳನ್ನು ಮುಚ್ಚುವ ಮತ್ತು ವಿಲೀನಗೊಳಿಸುವ ಮೂಲಕ ಬಡ ಹಾಗೂ ಕೂಲಿ ಕಾರ್ಮಿಕರ ಮಕ್ಕಳ ಶಿಕ್ಷಣದ ಹಕ್ಕನ್ನು ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ. ಸರ್ಕಾರ ಕೂಡಲೇ ಈ ಜನವಿರೋಧಿ ಕ್ರಮವನ್ನು ಕೈಬಿಡಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಕಾಂಗ್ರೆಸ್ ಸರ್ಕಾರದ ಕೆಪಿಎಸ್ ಮ್ಯಾಗ್ನೆಟ್ ಯೋಜನೆಯ ಹೆಸರಿನಲ್ಲಿ ರಾಜ್ಯದ 45 ಸಾವಿರ ಸರ್ಕಾರಿ ಶಾಲೆಗಳನ್ನು ಮುಚ್ಚುವ ಉದ್ದೇಶ ಹೊಂದಲಾಗಿದೆ. ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ-2020) ಜಾರಿಯೊಂದಿಗೆ ಏಷ್ಯನ್ ಅಭಿವೃದ್ಧಿ ಬ್ಯಾಂಕ್ (ಎಡಿಬಿ) ವಿಧಿಸಿರುವ ಅಪಾಯಕಾರಿ ಷರತ್ತುಗಳಿಗೆ ಸರ್ಕಾರ ಮಣಿದು, ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ಖಾಸಗಿಯವರ ಮಾರುಕಟ್ಟೆಗೆ ಒಪ್ಪಿಸಲು ಮುಂದಾಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸುವ ಬದಲು ಸರ್ಕಾರಿ ಶಾಲೆಗಳನ್ನು ಮುಚ್ಚುವ ಕ್ರಮ ಕೈಬಿಡಬೇಕು ಹಾಗೂ ಬಡ ಮಕ್ಕಳ ಶಿಕ್ಷಣದ ಹಕ್ಕನ್ನು ರಕ್ಷಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಅಬ್ದುಲ್ ವಾಹೀದ್, ಪ್ರೀತಿ ದೊಡ್ಡಮನಿ, ಗೋವಿಂದ ಯಳವಾರ, ನಾಗರಾಜ್, ಸ್ಫೂರ್ತಿ, ಯುವರಾಜ್, ಬಾಬು ಸೇರಿದಂತೆ ಎಐಡಿಎಸ್‌ಒ ಕಾರ್ಯಕರ್ತರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪತ್ರಿಕೆ ಓದಿನಿಂದ ಸ್ಪರ್ಧಾತ್ಮಕ ಪರೀಕ್ಷೆಗೆ ಅಗತ್ಯವಾದ ಜ್ಞಾನ ಲಭ್ಯ: ಮನೋಜಕುಮಾರ ಗುದ್ದಿ

ಶಹಾಬಾದ್ :

ಪತ್ರಿಕೆಗಳು ಕೇವಲ ಸುದ್ದಿಯ ಮಾಧ್ಯಮವಲ್ಲ, ಅವು ಜ್ಞಾನದ ಭಂಡಾರವಾಗಿವೆ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಗತ್ಯವಾದ ಹೆಚ್ಚಿನ ಜ್ಞಾನ ಪತ್ರಿಕೆಗಳ ಓದಿನಿಂದ ಲಭಿಸುತ್ತದೆ ಎಂದು ಹಿರಿಯ ವರದಿಗಾರ ಮನೋಜಕುಮಾರ ಗುದ್ದಿ ಹೇಳಿದರು.

ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಘಟಕದ ವತಿಯಿಂದ ಶನಿವಾರ ಆಯೋಜಿಸಿದ್ದ ಪತ್ರಿಕೆ ಓದು ಕುರಿತು ಉಪನ್ಯಾಸ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಇಂದು ಜನರಲ್ಲಿ ಓದುವ ಪ್ರವೃತ್ತಿ ಕಡಿಮೆಯಾಗುತ್ತಿದೆ. ಒಂದು ಪತ್ರಿಕೆ ಹೊರಬರಬೇಕಾದರೆ ಅದರ ಹಿಂದೆ ಪತ್ರಕರ್ತರ ಅಪಾರ ಶ್ರಮವಿರುತ್ತದೆ. ತಮ್ಮ ಜೀವನವನ್ನೇ ಮುಡಿಪಾಗಿಟ್ಟು ಪತ್ರಕರ್ತರು ಮಾಡುವ ವರದಿಗಳಿಂದ ಪತ್ರಿಕೆ ರೂಪುಗೊಳ್ಳುತ್ತದೆ. ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ವ್ಯಾಮೋಹದಿಂದ ಓದುವ ಹವ್ಯಾಸ ಕ್ಷೀಣಿಸುತ್ತಿದೆ. ಒಂದು ಪತ್ರಿಕೆಯಲ್ಲಿ ಇಡೀ ಜಗತ್ತಿನ ಜ್ಞಾನ ಅಡಕವಾಗಿದ್ದರೂ, ಅದನ್ನು ಓದುವ ಮನಸ್ಸು ಕಡಿಮೆಯಾಗುತ್ತಿದೆ. ಪತ್ರಿಕೆಗಳೇ ಇಲ್ಲವಾದರೆ ಸಮಾಜದ ಅಸ್ತಿತ್ವಕ್ಕೂ ಧಕ್ಕೆಯಾಗಲಿದೆ ಎಂದು ಹೇಳಿದರು. ಪತ್ರಿಕೆಗಳು ಸರ್ಕಾರಗಳ ಹಲವು ಹಗರಣಗಳನ್ನು ಬಯಲಿಗೆಳೆದು ಆಡಳಿತಾರೂಢರ ಕೆಂಗಣ್ಣಿಗೆ ಗುರಿಯಾಗಿವೆ. ಹಲವು ಸಂದರ್ಭಗಳಲ್ಲಿ ಸರ್ಕಾರಗಳು ಜಾಹೀರಾತುಗಳನ್ನು ತಡೆಹಿಡಿಯುವ ಮೂಲಕ ಪತ್ರಿಕೆಗಳ ಮೇಲೆ ಒತ್ತಡ ಹೇರಿವೆ. ಇಂತಹ ಸವಾಲುಗಳ ನಡುವೆಯೂ ಪತ್ರಕರ್ತರು ಎದೆಗುಂದದೆ ದೇಶದ ನಾಲ್ಕನೇ ಸ್ತಂಭವನ್ನು ಉಳಿಸಿಕೊಂಡು ಬಂದಿದ್ದಾರೆ. ವಿದ್ಯಾರ್ಥಿಗಳು ನಿರಂತರವಾಗಿ ಪತ್ರಿಕೆಗಳನ್ನು ಓದುವ ಮೂಲಕ ಹೆಚ್ಚಿನ ಜ್ಞಾನ ಸಂಪಾದಿಸಬೇಕು ಎಂದು ಸಲಹೆ ನೀಡಿದರು.

ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಾಬುರಾವ ಯಡ್ರಾಮಿ ಮಾತನಾಡಿ, ದೇಶದ ವಿವಿಧ ಕ್ಷೇತ್ರಗಳ ಸಾಧಕರನ್ನು ಗಮನಿಸಿದಾಗ ಅವರಲ್ಲಿ ಓದುವ ಹವ್ಯಾಸ ಪ್ರಮುಖವಾಗಿರುವುದು ಕಂಡುಬರುತ್ತದೆ. ಸರ್ಕಾರಿ ಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಯುಪಿಎಸ್‌ಸಿ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಬೇಕಾದರೆ ಪತ್ರಿಕೆಗಳ ಓದು ಬಹಳ ಮುಖ್ಯ. ಯುಪಿಎಸ್‌ಸಿ ಪರೀಕ್ಷೆ ಬರೆಯುವವರು ಪಠ್ಯಪುಸ್ತಕಗಳಿಗಿಂತಲೂ ಪತ್ರಿಕೆಗಳಿಂದ ಹೆಚ್ಚಿನ ಪ್ರಚಲಿತ ಜ್ಞಾನ ಪಡೆಯುತ್ತಾರೆ. ಹಿಂದುಳಿದ ರಾಜ್ಯವೆಂದು ಗುರುತಿಸಲ್ಪಡುವ ಬಿಹಾರದಿಂದ ಹೆಚ್ಚಿನ ಸಂಖ್ಯೆಯಲ್ಲಿ ಐಎಎಸ್ ಮತ್ತು ಐಪಿಎಸ್ ಅಧಿಕಾರಿಗಳು ಹೊರಬರಲು ಓದುವ ಹವ್ಯಾಸವೂ ಪ್ರಮುಖ ಕಾರಣವಾಗಿದೆ. ಜಿಲ್ಲೆಯ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಗಳಿಸಲು ಪತ್ರಿಕೆ ಓದುವುದನ್ನು ರೂಢಿಸಿಕೊಳ್ಳಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಪರಮೇಶ್ವರ ಪೆಂಚನಕರ್ ಮಾತನಾಡಿ, ವಿದ್ಯಾರ್ಥಿಗಳು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳ ವ್ಯಾಮೋಹದಿಂದ ಹೊರಬಂದು ಪತ್ರಿಕೆಗಳನ್ನು ಓದುವ ಮೂಲಕ ಉತ್ತಮ ಜ್ಞಾನ ಸಂಪಾದಿಸಬೇಕು ಎಂದು ಕರೆ ನೀಡಿದರು.

ಉದ್ಯಮಿ ಅಣವೀರ ಇಂಗಿನಶೆಟ್ಟಿ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ವೇದಿಕೆಯಲ್ಲಿ ಪತ್ರಕರ್ತರ ಸಂಘದ ಜಿಲ್ಲಾ ಕಾರ್ಯದರ್ಶಿ ವಾಸುದೇವ ಚವ್ಹಾಣ ಹಾಗೂ ತಾಲೂಕು ಸಂಘದ ಅಧ್ಯಕ್ಷ ಕೆ. ರಮೇಶ ಭಟ್ಟ ಉಪಸ್ಥಿತರಿದ್ದರು. ವಿದ್ಯಾರ್ಥಿಗಳಾದ ಪೂಜಾ, ಮಿನಾಕ್ಷಿ, ಅಂಜಲಿ, ಶರಣಬಸವ ಹಾಗೂ ನಾಗವೇಣಿ ಅವರು ಪತ್ರಿಕೆಗಳ ಕುರಿತು ಹಿರಿಯ ಪತ್ರಕರ್ತರೊಂದಿಗೆ ಸಂವಾದ ನಡೆಸಿದರು. ದೇವಿಕಾ ಸಂಗಡಿಗರು ಪ್ರಾರ್ಥಿಸಿದರು. ನಿಂಗಣ್ಣ ಜಂಬಗಿ ಸ್ವಾಗತಿಸಿದರು. ಕೆ. ರಮೇಶ ಭಟ್ಟ ಪ್ರಾಸ್ತಾವಿಕವಾಗಿ ಮಾತನಾಡಿದರು. ಲೋಹಿತಕಟ್ಟಿ ನಿರೂಪಿಸಿದರು. ಖಾಜಾ ಪಟೇಲ ವಂದಿಸಿದರು. ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಬನ್ಸಿ ಲಾಲ್ ಚವ್ಹಾಣ, ಮರಲಿಂಗ ಯಾದಗಿರಿ, ಪತ್ರಕರ್ತರಾದ ಮ. ಮಸ್ತಾನ, ಸಿದ್ದರಾಜ ಮಲ್ಕಂಡಿ, ಮಡಿವಾಳಪ್ಪ ಹೇರೂರ, ರಾಯಪ್ಪ ಕೊಟಗಾರ, ಶಿವಕುಮಾರ ಕುಸಾಳೆ, ದಯಾನಂದ ಸೇರಿದಂತೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಪತ್ರಿಕೆಗಳ ಕುರಿತು ಕೇಳಲಾದ ಪ್ರಶ್ನೆಗಳಿಗೆ ಸಮರ್ಪಕವಾಗಿ ಉತ್ತರಿಸಿದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಮಕ್ಕಳಲ್ಲಿ ವರದಿಗಾರಿಕೆಯ ಆಸಕ್ತಿ ಬೆಳೆಸುವ ಉದ್ದೇಶದಿಂದ ವಿದ್ಯಾರ್ಥಿಗಳಿಗೆ ಪತ್ರಿಕೆ, ನೋಟ್‌ಪ್ಯಾಡ್ ಹಾಗೂ ಪೆನ್ನುಗಳನ್ನು ವಿತರಿಸಲಾಯಿತು. ಕಾರ್ಯಕ್ರಮದ ವರದಿ ಬರೆದು ಸಲ್ಲಿಸುವ ಇಬ್ಬರು ವಿದ್ಯಾರ್ಥಿಗಳನ್ನು ಮುಂದಿನ ಕಾರ್ಯಕ್ರಮದಲ್ಲಿ ಸತ್ಕರಿಸಿ, ಪ್ರಮಾಣಪತ್ರ ಹಾಗೂ ಬಹುಮಾನ ನೀಡಲಾಗುವುದು ಎಂದು ಘೋಷಿಸಲಾಯಿತು.

ಕೆ.ವಿ.ನಾರಾಯಣ ಅವರ ಅಗಲಿಕೆಯಿಂದ ಕನ್ನಡ ಸಾಂಸ್ಕೃತಿಕ ಲೋಕದ ದನಿಯೊಂದು ಮೌನವಾಗಿದೆ: ಡಾ.ಭೀಮಾಶಂಕರ್ ಬಿರಾದಾರ್



ಬೀದರ್

ಹಿರಿಯ ವಿಮರ್ಶಕ, ಭಾಷಾ ತಜ್ಞ ಹಾಗೂಸಂಸ್ಕೃತಿ ಚಿಂತಕ ಪ್ರೊ. ಕೆ.ವಿ. ನಾರಾಯಣ ಅವರು ತಮ್ಮ ಬರಹ ಮತ್ತು ಆಲೋಚನೆಗಳ ಮೂಲಕ ಕನ್ನಡದ ಬೌದ್ಧಿಕ ಲೋಕಕ್ಕೆ ಹೊಸ ದಿಕ್ಕು ತೋರಿಸಿದ್ದಾರೆ. ಅವರ ಅಗಲಿಕೆಯಿಂದ ಕನ್ನಡ ಸಾಂಸ್ಕೃತಿಕ ಲೋಕದ ದನಿಯೊಂದು ಮೌನವಾದಂತಾಗಿದೆ ಎಂದು ಬಸವೇಶ್ವರ ಪದವಿ ಕಾಲೇಜಿನ ಪ್ರಾಚಾರ್ಯ ಡಾ. ಭೀಮಾಶಂಕರ್ ಬಿರಾದಾರ್ ಹೇಳಿದರು.

ನಗರದ ಬಸವೇಶ್ವರ ಪದವಿ ಪೂರ್ವ, ಪದವಿ, ಸ್ನಾತಕೋತ್ತರ ಹಾಗೂ ಅಕ್ಕಮಹಾದೇವಿ ಮಹಿಳಾ ಪದವಿ ಕಾಲೇಜುಗಳ ಸಹಯೋಗದಲ್ಲಿ ಶುಕ್ರವಾರ ಆಯೋಜಿಸಿದ್ದ ಕನ್ನಡದ ಹಿರಿಯ ಚಿಂತಕ ಪ್ರೊ.ಕೆ.ವಿ.ನಾರಾಯಣ ಅವರ ನುಡಿನಮನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೆವಿಎನ್ ಅವರು ಹಲವು ಒಳನೋಟಗಳ ಮೂಲಕ ಕನ್ನಡದ ಜ್ಞಾನ ಪರಂಪರೆಯನ್ನು ಕಟ್ಟಿಕೊಟ್ಟ ವಿದ್ವಾಂಸರಾಗಿದ್ದಾರೆ. ಭಾಷೆಯ ಮೂಲಕ ಬದುಕು, ಸಂಸ್ಕೃತಿ ಹಾಗೂ ಲೋಕವನ್ನು ನಿರ್ವಚಿಸಿದ ಅವರು ಕನ್ನಡ ಸಾಹಿತ್ಯದ ಬೇರು, ಕಾಂಡ ಮತ್ತು ಚಿಗುರುಗಳ ಕುರಿತು ಹಲವು ಸಂಕಥನಗಳನ್ನು ನಡೆಸಿದ್ದಾರೆ ಎಂದು ತಿಳಿಸಿದರು.

ಕುಪ್ಪಳಿ ವಿಚಾರ ಕಮ್ಮಟದಲ್ಲಿ ಹಿರಿಯರು ಮತ್ತು ಕಿರಿಯರನ್ನು ಒಟ್ಟಿಗೆ ಕರೆದುಕೊಂಡು ಹೋಗುವ ಅವರ ಅರಿವಿನ ದಾರಿ ಅನನ್ಯವಾಗಿತ್ತು. ಯಾವುದೇ ಹಮ್ಮುಬಿಮ್ಮುಗಳಿಲ್ಲದ ಸರಳ ವ್ಯಕ್ತಿತ್ವದ ಶ್ರೇಷ್ಠ ಚೇತನವಾಗಿದ್ದ ಅವರ ಅಗಲಿಕೆಯಿಂದ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ಜಗತ್ತಿನಲ್ಲಿ ಶೂನ್ಯ ಆವರಿಸಿದೆ ಎಂದು ಕೆವಿಎನ್ ಅವರೊಂದಿಗಿನ ಒಡನಾಟವನ್ನು ಸ್ಮರಿಸಿದರು.

ಪ್ರಾಚಾರ್ಯ ಡಾ. ರುದ್ರಮಣಿ ಮಠಪತಿ ಮಾತನಾಡಿ, ತಮ್ಮ ವಿದ್ವತ್ಪೂರ್ಣ ಲೇಖನಗಳು ಹಾಗೂ ಹೊಸ ದೃಷ್ಟಿಕೋನದ ಮೂಲಕ ಕನ್ನಡ ವಿಶ್ವವಿದ್ಯಾಲಯದ ನಿರ್ಮಾಣಕ್ಕೆ ಕೊಡುಗೆ ನೀಡಿದ ಚೇತನ ಕೆ.ವಿ. ನಾರಾಯಣ ಅವರಾಗಿದ್ದಾರೆ. ಬರಹ ಮತ್ತು ಭಾಷಾವಿಜ್ಞಾನದ ಮೂಲಕ ನಾಡಿನ ಸಾಹಿತ್ಯ ಜಗತ್ತಿನ ಹಿರಿಮೆ ಹೆಚ್ಚಿಸಿದ ಶ್ರೇಷ್ಠ ಭಾಷಾವಿಜ್ಞಾನಿಯಾಗಿದ್ದ ಅವರ ಅಗಲಿಕೆ ಸಾಹಿತ್ಯ ಲೋಕದಲ್ಲಿ ಅನಾಥ ಪ್ರಜ್ಞೆ ಮೂಡಿಸಿದೆ ಎಂದರು.

ಈ ಸಂದರ್ಭದಲ್ಲಿ ಅಕ್ಕಮಹಾದೇವಿ ಮಹಿಳಾ ಪದವಿ ಕಾಲೇಜಿನ ಪ್ರಾಚಾರ್ಯೆ ಮಾಯಾ ಮುರಾಳೆ, ಬಸವೇಶ್ವರ ಸ್ನಾತಕೋತ್ತರ ಕಾಲೇಜಿನ ಪ್ರಾಚಾರ್ಯೆ ಡಾ. ಶಾಂತಲಾ ಪಾಟೀಲ್, ನಿವೃತ್ತ ಶಿಕ್ಷಕಿ ಲಕ್ಷ್ಮೀಬಾಯಿ ಪಾಟೀಲ್, ಕನ್ಯಾಕುಮಾರಿ ಯನಗುಂದೆ, ಪ್ರಭುಲಿಂಗ್ ಕಲೋಜಿ, ಡಾ. ಬಸವರಾಜ ಖಂಡಾಳೆ, ಶ್ರೀನಿವಾಸ್ ಉಮಾಪುರೆ, ರೋಷನ್ ಬಿ., ವಿವೇಕಾನಂದ್ ಶಿಂಧೆ, ನಾಗರಾಜ್ ನಾಸೆ, ಪ್ರವೀಣ್ ಬಿರಾದಾರ್ ಎಂ.ಡಿ. ಇರ್ಫಾನ್, ಡಾ. ಭುವನೇಶ್ವರಿ ಶ್ರೀವಾತ್ಸವ್, ಸೌಮ್ಯಾ ಜೋಶಿ, ಪೂಜಾ ಗಂಗು, ಸಂಗೀತಾ ಮಹಾಗಾವೆ, ಜಗದೇವಿ ಜವಳಗೆ, ಚೆನ್ನಬಸಪ್ಪ ಗೌರ್ ಪ್ರಿಯಾ ಚೌಹಾನ್, ನಾಗವೇಣಿ ಬಿರಾದಾರ್ ಶೀತಲ್ ರೆಡ್ಡಿ, ಸಚಿನ್ ಬಿಡುವೆ, ದಶರಥ್ ಹಾಗೂ ಯೋಗೇಶ್ ಕ್ಷೀರಸಾಗರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಬರ ಪರಿಹಾರ, ಕಬ್ಬಿಗೆ ಬೆಂಬಲ ಬೆಲೆ ಸಹಿತ ರೈತರ ಸಮಸ್ಯೆ ಪರಿಹರಿಸಲು ಆಗ್ರಹಿಸಿ ಮನವಿ

ಬೀದರ್,

ಮುಂಗಾರು ಹಾಗೂ ಹಿಂಗಾರು ಹಂಗಾಮಿನ ಬೆಳೆಗಳು ಮಳೆಯಿಲ್ಲದೆ ಸಂಪೂರ್ಣ ನಷ್ಟವಾಗಿವೆ. ಅಂತರ್ಜಲ ಮಟ್ಟ ಕುಸಿದು ಬಾವಿ, ಕೊಳವೆಬಾವಿ ಹಾಗೂ ನದಿಗಳೂ ಬತ್ತಿಹೋಗಿವೆ. ಇದರಿಂದ ಜಾನುವಾರುಗಳಿಗೆ ಮೇವು ಮತ್ತು ನೀರಿನ ಕೊರತೆ ಉಂಟಾಗಿದೆ. ಸರ್ಕಾರ ಬರಗಾಲ ಘೋಷಿಸಿ ಎರಡು ತಿಂಗಳು ಕಳೆದರೂ ರೈತರಿಗೆ ಈವರೆಗೆ ಒಂದು ನಯಾಪೈಸೆಯೂ ಪರಿಹಾರ ದೊರೆತಿಲ್ಲ. ಜಿಲ್ಲೆಯ ರೈತರು ಬರಗಾಲದಿಂದ ತತ್ತರಿಸಿದ್ದು, ಅವರ ಸಮಸ್ಯೆಗಳನ್ನು ಶೀಘ್ರ ಪರಿಹರಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಆಗ್ರಹಿಸಿದೆ.



ನಗರದ ಜಿಲ್ಲಾ ಪಂಚಾಯಿತಿ ಆವರಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರಿಗೆ ಶುಕ್ರವಾರ ಮನವಿ ಸಲ್ಲಿಸಿದ ಸಂಘದ ಪದಾಧಿಕಾರಿಗಳು, ಬೀದರ್ ಜಿಲ್ಲೆಯಲ್ಲಿ ಕಬ್ಬು ಪ್ರಮುಖ ವಾಣಿಜ್ಯ ಬೆಳೆಯಾಗಿದೆ. ಮಳೆಯ ಕೊರತೆಯಿಂದ ಕಬ್ಬಿನ ಬೆಳೆಗಳೂ ಒಣಗುತ್ತಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ತಿಳಿಸಿದ್ದಾರೆ.

ಪ್ರತಿ ಟನ್ ಕಬ್ಬಿಗೆ 5,500 ರೂ. ಬೆಂಬಲ ಬೆಲೆ ನಿಗದಿಪಡಿಸಬೇಕು. ಇದರ ಜೊತೆಗೆ ಪ್ರತಿ ಟನ್ ಕಬ್ಬಿಗೆ ರಾಜ್ಯ ಸರ್ಕಾರದಿಂದ 1,000 ರೂ. ಪ್ರೋತ್ಸಾಹಧನ ನೀಡಬೇಕು. ಶೀಘ್ರದಲ್ಲಿ ಪ್ರತಿ ಎಕರೆಗೆ ಕನಿಷ್ಠ 25 ಸಾವಿರ ರೂ. ಬರ ಪರಿಹಾರ ಒದಗಿಸಬೇಕು. ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು. ಮುಂಗಾರು ಹಂಗಾಮಿನಲ್ಲಿ ಬೆಳೆ ವಿಮೆ ಮಾಡಿಸಿದ ರೈತರಿಗೆ ಕೂಡಲೇ ವಿಮೆ ಪರಿಹಾರ ಕೊಡಿಸಬೇಕು. 2025-26ನೇ ಸಾಲಿನಲ್ಲಿ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳು ಬಾಕಿ ಉಳಿಸಿಕೊಂಡಿರುವ ಹಣವನ್ನು ತಕ್ಷಣ ರೈತರ ಖಾತೆಗಳಿಗೆ ಜಮೆ ಮಾಡಿಸಬೇಕು ಎಂದು ಒತ್ತಾಯಿಸಿದ್ದಾರೆ. ಕಬ್ಬಿನ ತೂಕದಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಸರ್ಕಾರದಿಂದಲೇ ಎಲೆಕ್ಟ್ರಾನಿಕ್ ತೂಕದ ಯಂತ್ರಗಳನ್ನು ಅಳವಡಿಸಬೇಕು. ಈ ವರ್ಷ ಬರಗಾಲ ಇರುವುದರಿಂದ ಪ್ರತಿ ಜಾನುವಾರಿಗೆ ಮೇವಿಗಾಗಿ 10 ಸಾವಿರ ರೂ. ನೀಡಬೇಕು. ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಯನ್ನು ಶೀಘ್ರದಲ್ಲಿ ಗುತ್ತಿಗೆ ಆಧಾರದಲ್ಲಿ ವಹಿಸಿ, ಪುನರಾರಂಭಿಸಬೇಕು ಎಂದು ಆಗ್ರಹಿಸಿದ್ದಾರೆ.

ಮೇಲಿನ ಎಲ್ಲ ಸಮಸ್ಯೆಗಳನ್ನು ಕೂಡಲೇ ಪರಿಹರಿಸಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಇಡೀ ಬೀದರ್ ಜಿಲ್ಲೆ ಬಂದ್ ಮಾಡಿ ಉಗ್ರ ಹೋರಾಟ ನಡೆಸಲಾಗುವುದು. ಇದರಿಂದ ಉಂಟಾಗುವ ಪರಿಣಾಮಗಳಿಗೆ ಸರ್ಕಾರವೇ ಹೊಣೆ ಎಂದು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾ ಗೌರವಾಧ್ಯಕ್ಷ ಸಿದ್ರಾಮಪ್ಪ ಆಣದೂರೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶೋಭಾವತಿ ಕಾರಭಾರಿ ಸೇರಿದಂತೆ ಅನೇಕ ರೈತರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಕತಾರ್ ಕನ್ನಡ ಸಮ್ಮಾನ್ ಪ್ರಶಸ್ತಿ ಸ್ವೀಕರಿಸಿ ಭಾವುಕರಾದ ಡಾ. ಉಮಾಶ್ರೀ

ಪರದೇಶದಲ್ಲೂ ಕನ್ನಡವನ್ನು ಉಳಿಸಿರುವುದು ನಿಜವಾದ ದೇಶಪ್ರೇಮ -ಉಪಸಭಾಪತಿ ಡಾ. ಉಮಾಶ್ರೀ

ಕಲಿಯಿರಿ ಎಂದೇಳಿದರೆ, ಅಲ್ಲಿನ ಮಕ್ಕಳೇ ನಿರ್ಲಕ್ಷ್ಯ ತೋರುವಂತಹ ಈ ಕಾಲದಲ್ಲಿ, ಇಷ್ಟು ದೂರದ ನಾಡಿನಲ್ಲಿ ನೀವು ಕನ್ನಡವನ್ನು ಉಳಿಸುವುದಕ್ಕೆ ಕಷ್ಟಪಡುತ್ತಿರುವುದು, ಪ್ರಯತ್ನ ಮಾಡುತ್ತಿರುವುದು ಸಾಧಾರಣವಾದ ವಿಷಯವಲ್ಲ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಕತಾರ್ ಕನ್ನಡಿಗರ ಸಮ್ಮಿಲನ

ಖ್ಯಾತ ಹೃದ್ರೋಗ ತಜ್ಞ ಹಾಗೂ ಸಂಸದ ಡಾ. ಸಿ.ಎನ್. ಮಂಜುನಾಥ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಶಾಸಕರಾದ ಮೊಯಿನುದ್ದೀನ್ ಬಾವ, ಕತಾರ್ ಕರ್ನಾಟಕ ಸಂಘದ ಅಧ್ಯಕ್ಷರಾದ ಸುಬ್ರಹ್ಮಣ್ಯ, ಮಾಜಿ ಅಧ್ಯಕ್ಷರಾದ ರವಿ ಶೆಟ್ಟಿ, ಕನ್ನಡ ಪ್ರಾಧಿಕಾರದ ಕಾರ್ಯದರ್ಶಿಗಳಾದ ಸಂತೋಷ್ ಹಾನಗಲ್, ಭಾರತೀಯ ರಾಯಭಾರ ಕಚೇರಿಯ ಆಶ್ರಯದಲ್ಲಿ ಕಾರ್ಯನಿರ್ವಹಿಸುವ ಭಾರತೀಯ ಸಾಂಸ್ಕೃತಿಕ ಕೇಂದ್ರದ ಅಧ್ಯಕ್ಷರಾದ ಮಣಿಕಂಠನ್ ಸೇರಿದಂತೆ ಕತಾರ್ ನಲ್ಲಿರುವ ನೂರಾರು ಕನ್ನಡಿಗರು, ಉದ್ಯಮಿಗಳು, ಕಲಾವಿದರು ಭಾಗವಹಿಸಿದ್ದರು.

ಕರ್ನಾಟಕದ ಖ್ಯಾತ ಕಲಾವಿದರಿಂದ ಹಾಸ್ಯ, ಸಂಗೀತ ಮತ್ತು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಭಾರತೀಯ ರಾಯಭಾರ ಕಚೇರಿಯ ಆಶ್ರಯದಲ್ಲಿ ಕಾರ್ಯನಿರ್ವಹಿಸುವ ಭಾರತೀಯ ಸಾಂಸ್ಕೃತಿಕ ಕೇಂದ್ರದ ಸಂಯೋಜಿತ ಸಂಸ್ಥೆಯಾಗಿರುವ ಕರ್ನಾಟಕ ಸಂಘವು ಈ ಕಾರ್ಯಕ್ರಮವನ್ನು ಆಯೋಜಿಸಿತ್ತು.

ನ.12ರಂದು ರಾಯಚೂರಿನಲ್ಲಿ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆ

ಆಯೋಜಿಸಲಾಗಿದೆ. ಸೃಜನಾತ್ಮಕ ಪ್ರದರ್ಶನ ಕಲೆಗಳ ವಿಭಾಗದಲ್ಲಿ ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕರ್ನಾಟಕ ಹಾಗೂ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ವಾದ್ಯ ಸಂಗೀತ ಮತ್ತು ಯೋಗ ಸ್ಪರ್ಧೆಗಳು ನಡೆಯಲಿವೆ. ವಿಜ್ಞಾನ ವಿಭಾಗದಲ್ಲಿ ನೂತನ ಆವಿಷ್ಕಾರಗಳು ಹಾಗೂ ಪ್ರಯೋಗಗಳನ್ನು ಪ್ರದರ್ಶಿಸಲು ಅವಕಾಶವಿದೆ.

ಇದರೊಂದಿಗೆ, ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಬಡವರ ಬದುಕಿನಲ್ಲಿ ಆದ ಸಕಾರಾತ್ಮಕ ಬೆಳವಣಿಗೆ ಎಂಬ ವಿಷಯದ ಕುರಿತು ವಿಶೇಷ ಭಾಷಣ ಸ್ಪರ್ಧೆಯನ್ನೂ ಆಯೋಜಿಸಲಾಗಿದೆ. 16 ವರ್ಷದೊಳಗಿನ ಅತ್ಯುತ್ತಮ ಅಭ್ಯರ್ಥಿಯನ್ನು ಜಿಲ್ಲಾ ಅಥವಾ ತಾಲೂಕು ಮಟ್ಟದಲ್ಲಿ ಆಯ್ಕೆ ಮಾಡಿ, ಅವರ ಭಾಷಣವನ್ನು ವಿಡಿಯೋ ಚಿತ್ರೀಕರಿಸಿ ವಾಟ್ಸ್ ಆ್ಯಪ್ ಗ್ರೂಪ್‌ಗಳಲ್ಲಿ ಪ್ರಸಾರ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಆಸಕ್ತ ಮಕ್ಕಳು ನವೆಂಬರ್ 11ರ ಸಂಜೆ 5 ಗಂಟೆಯೊಳಗಾಗಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಬಾಲಭವನದ ಕಾರ್ಯಕ್ರಮ ಸಂಯೋಜಕಿ ದೀಪಾ (ಮೊ. 966343137) ಅಥವಾ ಕಚೇರಿ ಸಹಾಯಕಿ ತಾರಮ್ಮ (ಮೊ. 9900409171) ಅವರನ್ನು ಸಂಪರ್ಕಿಸಬಹುದು ಎಂದು ರಾಯಚೂರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಡಿತರ ವಿತರಕರ ವಿವಿಧ ಬೇಡಿಕೆ ಈಡೇರಿಸಲು ಆಗ್ರಹ



ಕಲಬುರಗಿ,

ಬಾಕಿ ಕಮಿಷನ್ ಹಣ ಪಾವತಿ ಸೇರಿದಂತೆ ಪಡಿತರ ವಿತರಕರು ಎದುರಿಸುತ್ತಿರುವ ವಿವಿಧ ಗಂಭೀರ ಸಮಸ್ಯೆಗಳನ್ನು ತಕ್ಷಣ ಪರಿಹರಿಸುವಂತೆ ಕಲಬುರಗಿ ಜಿಲ್ಲಾ ಪಡಿತರ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಆಗ್ರಹಿಸಿದ್ದಾರೆ.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಘದ ಪದಾಧಿಕಾರಿಗಳು, ಪ್ರತಿ ತಿಂಗಳು ಯಾವುದೇ ಬಾಕಿ ಉಳಿಸಿಕೊಳ್ಳದೆ ವಿತರಕರ ಕಮಿಷನ್ ಹಣವನ್ನು ನಿಯಮಿತವಾಗಿ ಪಾವತಿಸಬೇಕು. ಸಗಟು ಮಳಿಗೆಗಳಿಂದ ಪಡಿತರ ಧಾನ್ಯವನ್ನು ವಿಳಂಬವಿಲ್ಲದೆ ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿ ತಿಂಗಳು ಎದುರಾಗುತ್ತಿರುವ ನೆಟ್‌ವರ್ಕ್ ಹಾಗೂ ಸರ್ವರ್ ಸಮಸ್ಯೆಗಳಿಂದ ಪಡಿತರ ವಿತರಣೆಗೆ ಅಡಚಣೆಯಾಗುತ್ತಿದೆ. ಆದ್ದರಿಂದ ತಾಂತ್ರಿಕ ದೋಷಗಳನ್ನು ತಕ್ಷಣ ನಿವಾರಿಸಬೇಕು. ಕಳೆದ 45 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಹಿರಿಯ ವಿತರಕರಿಗೆ ಅನುಬಂಧದ ಆಧಾರದ ಮೇಲೆ ವಿಧಿಸಲಾಗಿರುವ ಗರಿಷ್ಠ ವಯೋಮಿತಿ ನಿರ್ಬಂಧವನ್ನು ತೆರವುಗೊಳಿಸಬೇಕು ಎಂದು ಆಗ್ರಹಿಸಿದರು.

ಪಡಿತರ ಧಾನ್ಯ ಸರಬರಾಜು ಮಾಡುವಾಗ ಸೂಕ್ತ ಮತ್ತು ನಿಖರವಾದ ತೂಕದೊಂದಿಗೆ ಪೂರೈಸಬೇಕು. ಬಾಕಿ ಇರುವ ಇ-ಕೆವೈಸಿ ಕಮಿಷನ್ ಹಾಗೂ ಬರಗಾಲ ಘೋಷಣೆಯ ಪರಿಹಾರದ ಹಣವನ್ನು ಡಿಬಿಟಿ ಮೂಲಕ ಕೂಡಲೇ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ದ್ವೇಷಪೂರಿತ ಅಥವಾ ಸುಳ್ಳು ದೂರುಗಳ ಆಧಾರದ ಮೇಲೆ ವಿತರಕರಿಗೆ ಅನಗತ್ಯವಾಗಿ ದಂಡ ವಿಧಿಸುವುದನ್ನು ನಿಲ್ಲಿಸಬೇಕು. ಯಾವುದೇ ಕ್ರಮ ಕೈಗೊಳ್ಳುವ ಮೊದಲು ದೂರುಗಳ ಸತ್ಯಾಸತ್ಯತೆಯನ್ನು ಪರಿಶೀಲಿಸಬೇಕು. ರಾಜ್ಯದ ಎಲ್ಲ ನ್ಯಾಯಬೆಲೆ ಅಂಗಡಿ ವಿತರಕರ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರ ತಕ್ಷಣ ಈಡೇರಿಸಬೇಕು ಎಂದು ಸಂಘದ ಪದಾಧಿಕಾರಿಗಳು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಗೌರವಾಧ್ಯಕ್ಷ ಮೊಹಮ್ಮದ್ ಮುಖೀದ್, ಅಧ್ಯಕ್ಷ ಶಾಂತಪ್ಪ ಆರ್. ಪಾಟೀಲ, ಉಪಾಧ್ಯಕ್ಷ ಸುಭಾಷ್ ಹೆಚ್. ಚೌಧರಿ, ಪ್ರಧಾನ ಕಾರ್ಯದರ್ಶಿ ಪರಮೇಶ್ವರ ಎಸ್. ಚೀಲ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯದಲ್ಲಿ ನೂತನ ವಿದ್ಯಾರ್ಥಿಗಳಿಗೆ ಓರಿಯಂಟೇಶನ್ ಕಾರ್ಯಕ್ರಮ



ಕಲಬುರಗಿ:

ಕರ್ನಾಟಕ ಪೀಪಲ್ಸ್ ಎಜುಕೇಷನ್ ಸೊಸೈಟಿಯ ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯದಲ್ಲಿ ಐಕ್ಯೂಎಸಿ ವತಿಯಿಂದ ಪ್ರಥಮ ವರ್ಷದ ಮೂರು ಮತ್ತು ಐದು ವರ್ಷಗಳ ಬಿ.ಎ. ಎಲ್‌ಎಲ್.ಬಿ. ಕೋರ್ಸ್‌ಗಳ ನೂತನ ವಿದ್ಯಾರ್ಥಿಗಳಿಗಾಗಿ ಶನಿವಾರ ಓರಿಯಂಟೇಶನ್ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮಹಾವಿದ್ಯಾಲಯದ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸೊಸೈಟಿಯ ಪ್ರಧಾನ ಕಾರ್ಯದರ್ಶಿ ಶಾಂತಪ್ಪ ಸುರನ್ ವಹಿಸಿದ್ದರು. ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕಾನೂನು ವಿಭಾಗದ ಮುಖ್ಯಸ್ಥ ಡಾ. ಅನಂತ ಡಿ. ಚಿಂಚುರೆ ಮುಖ್ಯ ಅತಿಥಿಯಾಗಿ ಪಾಲ್ಗೊಂಡು, ಕಾನೂನು ಶಿಕ್ಷಣದ ಮಹತ್ವ, ನೈತಿಕ ಮೌಲ್ಯಗಳು ಹಾಗೂ ವಕೀಲ ವೃತ್ತಿಯ ಜವಾಬ್ದಾರಿಗಳ ಕುರಿತು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಎಂಎಸ್‌ಐ ಪಿಯು ಕಾಲೇಜಿನ ನಿವೃತ್ತ ಪ್ರಾಂಶುಪಾಲ ನರೇಂದ್ರ ಬಡಶೇಷಿ ಗೌರವಾನ್ವಿತ ಅತಿಥಿಯಾಗಿ ಹಾಗೂ ಸೊಸೈಟಿಯ ಆಡಳಿತಾಧಿಕಾರಿ ಡಾ. ಚಂದ್ರಶೇಖರ್ ಶೀಲವಂತ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ತಿಪ್ಪೇಸ್ವಾಮಿ ಎಸ್., ಐಕ್ಯೂಎಸಿ ಸಂಯೋಜಕಿ ಡಾ. ಅಪರ್ಣಾ ಜೆ. ಶಿಂಧೆ, ಲೀಗಲ್ ಏಡ್ ಸೆಲ್ ಸಂಯೋಜಕ ಡಾ. ಎಸ್. ಚಂದ್ರಶೇಖರ್, ವಿದ್ಯಾರ್ಥಿ ಕಲ್ಯಾಣ ಕೋಶದ ನಿರ್ದೇಶಕ ಮಹಾಂತೇಶ ಬಿ., ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಕೆ.ಜಿ. ಜವಳಿ ಸೇರಿದಂತೆ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

ಓರಿಯಂಟೇಶನ್ ಕಾರ್ಯಕ್ರಮದಲ್ಲಿ ನೂತನ ವಿದ್ಯಾರ್ಥಿಗಳಿಗೆ ಕಾಲೇಜಿನ ನಿಯಮಾವಳಿ, ಪಠ್ಯಕ್ರಮ, ಗ್ರಂಥಾಲಯ, ಮೂಟ್ ಕೋರ್ಟ್, ಲೀಗಲ್ ಏಡ್ ಸೆಲ್, ಎನ್‌ಎಸ್‌ಎಸ್ ಹಾಗೂ ವಿದ್ಯಾರ್ಥಿ ಕಲ್ಯಾಣ ಚಟುವಟಿಕೆಗಳ ಕುರಿತು ಮಾಹಿತಿ ನೀಡಲಾಯಿತು.

ವಿದ್ಯಾರ್ಥಿಗಳೊಂದಿಗೆ ಪಾಲಕರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದ್ದರು. ಕಾನೂನು ಕ್ಷೇತ್ರದಲ್ಲಿ ಉತ್ತಮ ಜ್ಞಾನ ಸಂಪಾದಿಸುವುದರೊಂದಿಗೆ ನೈತಿಕ ಮೌಲ್ಯಗಳನ್ನು ಅಳವಡಿಸಿ ಕೊಂಡು ವಿದ್ಯಾರ್ಥಿಗಳು ಉಜ್ವಲ ಭವಿಷ್ಯ ರೂಪಿಸಿಕೊಳ್ಳುವಂತೆ ಅತಿಥಿಗಳು ಶುಭ ಹಾರೈಸಿದರು. ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಬಸವಾದಿ ಶರಣರ ಸಾಮಾಜಿಕ ಕ್ರಾಂತಿ ಖಡ್ಗವಿಲ್ಲದ ಕ್ರಾಂತಿ : ಪ್ರೊ.ಬಾಪುಗೌಡ ಬಿರಾದಾರ



ಅಫಜಲಪುರ:

ಜಗತ್ತಿನ ಬಹುತೇಕ ಕ್ರಾಂತಿಗಳು ಖಡ್ಗಯುದ್ಧ ಹಾಗೂ ರಕ್ತಪಾತದ ಮೂಲಕ ನಡೆದಿವೆ. ಆದರೆ ಬಸವಾದಿ ಶರಣರು ಖಡ್ಗವಿಲ್ಲದೆ ಸಾಮಾಜಿಕ ಕ್ರಾಂತಿ ಮಾಡಿದವರು. ವಚನ ಚಳವಳಿಯು ಇತಿಹಾಸದಲ್ಲಿ ವಿಶಿಷ್ಟ ಸ್ಥಾನ ಹೊಂದಿದ್ದು, ಇಂದಿಗೂ ಪ್ರಸ್ತುತವಾಗಿದೆ ಎಂದು ಪ್ರೊ. ಬಾಪುಗೌಡ ಬಿರಾದಾರ ಹೇಳಿದರು.

ಪಟ್ಟಣದ ಬಸವ ಮಂಟಪದಲ್ಲಿ ತಾಲೂಕು ಜಾಗತಿಕ ಲಿಂಗಾಯತ ಮಹಾಸಭಾ, ಭಾರತೀಯ ಬಸವ ಬಳಗ ಹಾಗೂ ಬಸವ ಮಾರ್ಗ ಪ್ರತಿಷ್ಠಾನ ಅಫಜಲಪುರ ವತಿಯಿಂದ ಆಯೋಜಿಸಿದ್ದ ಶರಣ ಸಂಗಮ ಹಾಗೂ ಲಿಂ. ಡಾ. ಸಿ.ವಿ. ಟಕ್ಕಳಕಿ ಅವರ ನುಡಿನಮನ ಕಾರ್ಯಕ್ರಮದಲ್ಲಿ ಅನುಭಾವ ನೀಡುತ್ತ ಅವರು ಮಾತನಾಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಶರಣೆ ದಾಕ್ಷಾಯಣಿ ಗುರುಲಿಂಗಪ್ಪ ಉಪಾಸೆ ಅವರು ಡಾ. ಸಿ.ವಿ. ಟಕ್ಕಳಕಿ ಅವರ ವೈದ್ಯಕೀಯ ಹಾಗೂ ಸಾಮಾಜಿಕ ಸೇವೆಯನ್ನು ಸ್ಮರಿಸಿದರು.

ಡಾ. ಸಿ.ವಿ. ಟಕ್ಕಳಕಿ ಅವರು ದಣಿವರಿಯದ ಕಾಯಕಜೀವಿಯಾಗಿದ್ದರು. ನಿರಂತರವಾಗಿ ರೋಗಿಗಳ ಶುಶ್ರೂಷೆ ಹಾಗೂ ಸೇವೆಯಲ್ಲಿ ತೊಡಗಿಸಿಕೊಂಡಿದ್ದರು. ಸೇವೆ ಮಾಡುವುದು ದೇವರು ತಮಗೆ ನೀಡಿರುವ ವರ, ಜನರ ಸೇವೆಯೇ ದೇವರ ಸೇವೆ ಎಂದು ಭಾವಿಸಿದ್ದರು ಎಂದು ನೆನಪಿಸಿಕೊಂಡರು.

ಶರಣ ಶಂಕರರಾವ್ ಹುಲ್ಲೂರ ಅಧ್ಯಕ್ಷತೆ ವಹಿಸಿದ್ದರು. ಹಿರಿಯರಾದ ಮಕಬೂಲ್ ಪಟೇಲ್, ಸದಾಶಿವ ಮೇತ್ರಿ, ಅಶೋಕ ತಳವಾಡೆ ಹಾಗೂ ಶರಣಪ್ಪ ಹಲಸೆ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಡಾ. ಸಂಗಮೇಶ ಟಕ್ಕಳಕಿ, ಪೂಜಾ ಟಕ್ಕಳಕಿ, ರಾಘವೇಂದ್ರ ಕಲಶೆಟ್ಟಿ, ಶಿವಶರಣಪ್ಪ ಲಾವಣಿ, ಬಸಣ್ಣ ಗುಣಾರಿ, ಅಬ್ಬಾಸಲಿ ನದಾಫ್, ಶ್ರೀಶೈಲ ಮೇತ್ರಿ, ಗೋಪಾಲ್ ಹಳ್ಯಾಳ, ಶಾಂತಪ್ಪ ಅಂಜುಟಗಿ, ಶರಣಪ್ಪ ಮೇತ್ರಿ, ಪ್ರಭಾವತಿ ಮೇತ್ರಿ, ಬಸವಣ್ಣಪ್ಪ ಉಪ್ಪಾರ, ಚಂದ್ರಶೇಖರ್ ಕೆಂಗನಾಳ, ಸುನಂದಾ ಪಾಟೀಲ, ಸಿದ್ದನಗೌಡ ಮಾಲಿಪಾಟೀಲ ಸೇರಿದಂತೆ ಶರಣ ಅನುಯಾಯಿಗಳು, ಡಾ. ಸಿ.ವಿ. ಟಕ್ಕಳಕಿ ಅವರ ಕುಟುಂಬಸ್ಥರು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

ಶಿಕ್ಷಕ ರವಿಚಂದ್ರ ಅತನೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುರುಘೇಂದ್ರ ಮಸಳಿ ಸ್ವಾಗತಿಸಿದರು. ಮೃತ್ಯುಂಜಯ ಕಳ್ಳಿಮಠ ಹಾಗೂ ಚಿದಾನಂದ ಗವಾಯಿಗಳು ವಚನ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ರೋಹಿಣಿ ಮಂಜುನಾಥ ಕಲಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು. ಸಿದ್ಧರಾಮು ನಾಗೇಂದ್ರ, ನಾಗಬಾ ವಂದಿಸಿದರು.



ವಿದ್ಯಾರ್ಥಿ ಸಾವು ಪ್ರಕರಣ: ಕುಟುಂಬಕ್ಕೆ 50 ಲಕ್ಷ ರೂ. ಪರಿಹಾರ, ಸರಕಾರಿ ಉದ್ಯೋಗಕ್ಕೆ ಆಗ್ರಹ

ಕಲಬುರಗಿ:

ನಗರದ ಡಾ.ಬಿ.ಆರ್.ಅಂಬೇಡ್ಕರ್ ವಸತಿ ನಿಲಯದ ನಾಲ್ಕನೇ ಮಹಡಿಯಿಂದ ಬಿದ್ದು ಬಿ.ಎಸ್ಸಿ . ನರ್ಸಿಂಗ್ ವಿದ್ಯಾರ್ಥಿ ಮೃತಪಟ್ಟ ಪ್ರಕರಣಕ್ಕೆ ಜಿಲ್ಲಾಡಳಿತದ ನಿರ್ಲಕ್ಷ್ಯವೇ ಕಾರಣ ಎಂದು ದಲಿತ ಸಂಘರ್ಷ ಸಮಿತಿ ಭೀಮಮಾರ್ಗ (ರಿ.) ಆರೋಪಿಸಿದೆ. ವಸತಿ ನಿಲಯಗಳಲ್ಲಿ ಇತ್ತೀಚಿನ ದಿನಗಳಲ್ಲಿ ಇಂತಹ ದುರ್ಘಟನೆಗಳು ಮರುಕಳಿಸುತ್ತಿದ್ದರೂ ಅಧಿಕಾರಿಗಳು ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಲ್ಲಿ ನಿರ್ಲಕ್ಷ್ಯ ವಹಿಸಿದ್ದಾರೆ. ಹಾಸ್ಟೆಲ್‌ಗಳಿಗೆ ನಿಯಮಿತವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕಾದ ಅಧಿಕಾರಿಗಳು ಕರ್ತವ್ಯ ಲೋಪ ಎಸಗಿದ್ದಾರೆ ಎಂದು ಸಮಿತಿ ದೂರಿದೆ. ಮಧ್ಯರಾತ್ರಿ ಸುಮಾರು 2 ಗಂಟೆಗೆ ನಾಲ್ಕನೇ ಮಹಡಿಯಿಂದ ಬಿದ್ದು ವಿದ್ಯಾರ್ಥಿ ಮೃತಪಟ್ಟಿರುವ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಬೇಕು. ಕರ್ತವ್ಯ ನಿರ್ಲಕ್ಷ್ಯ ತೋರಿದ ಹಾಸ್ಟೆಲ್ ವಾರ್ಡನ್, ಜಂಟಿ ನಿರ್ದೇಶಕ ಹಾಗೂ ಸಹಾಯಕ ನಿರ್ದೇಶಕರನ್ನು ತಕ್ಷಣ ಅಮಾನತುಗೊಳಿಸಿ, ಅವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಸಮಿತಿ ಒತ್ತಾಯಿಸಿದೆ. ಮೃತ ವಿದ್ಯಾರ್ಥಿಯ ಕುಟುಂಬಕ್ಕೆ 50 ಲಕ್ಷ ರೂ. ಪರಿಹಾರ, ಒಂದು ಎಕರೆ ಜಮೀನು ಹಾಗೂ ಕುಟುಂಬದ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡಬೇಕು ಎಂದು ಮುಖ್ಯಮಂತ್ರಿ, ಡಿ.ಕೆ. ಶಿವಕುಮಾರ ಅವರಿಗೆ ಜಿಲ್ಲಾಧಿಕಾರಿಗಳ ಮೂಲಕ ಸಲ್ಲಿಸಿದ ಮನವಿಯಲ್ಲಿ ಆಗ್ರಹಿಸಲಾಗಿದೆ. ಸಮಿತಿಯ ಜಿಲ್ಲಾ ಸಂಚಾಲಕ ಕೈಲಾಸ ದೊಡ್ಡಮನಿ, ಮಲ್ಲಿಕಾರ್ಜುನ ಬನಸೋಡೆ, ಶಿವಕುಮಾರ ಬಂದಗೆ, ವಿಜಯಕುಮಾರ ಕೌಲಗಿ, ಮಹಾಂತೇಶ ಮಹಾಂತನೂರ, ಡಾ. ಕಾಶೀನಾಥ ಊಡಗಿ, ಸುನೀತಾ ನಂದೂರಕರ್ ಮಾರುತಿ ತೇಗಲತಿಪ್ಪಿ, ರಾಹುಲ್ ಹಾಗರಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ವಸತಿ ನಿಲಯದ ನಾಲ್ಕನೇ ಮಹಡಿಯಿಂದ ಬಿದ್ದು ನರ್ಸಿಂಗ್ ವಿದ್ಯಾರ್ಥಿ ಅನುಮಾನಾಸ್ಪದ ಮೃತ್ಯು

ಕಲಬುರಗಿ:

ನಗರದ ರಾಜಾಪುರ ರಸ್ತೆಯಲ್ಲಿರುವ ಬಾಬು ಜಗಜೀವನ ರಾಮ್ ವಸತಿ ನಿಲಯದ ನಾಲ್ಕನೇ ಮಹಡಿಯಿಂದ ಬಿದ್ದು ವಿದ್ಯಾರ್ಥಿಯೊಬ್ಬ ಅನುಮಾನಾಸ್ಪದವಾಗಿ ಮೃತಪಟ್ಟ ಘಟನೆ ಗುರುವಾರ ತಡರಾತ್ರಿ ನಡೆದಿದೆ.

ಮೃತ ವಿದ್ಯಾರ್ಥಿಯನ್ನು ಚಿತ್ತಾಪುರ ತಾಲೂಕಿನ ಕುಂದನೂರು ಗ್ರಾಮದ ನಿವಾಸಿ ಮುಜಾಹೀದ್ ಪಟೇಲ್ (25) ಎಂದು ಗುರುತಿಸಲಾಗಿದೆ. ಅವರು ನಗರದ ಕಾಲೇಜೊಂದರಲ್ಲಿ ಬಿಎಸ್ಸಿ ನರ್ಸಿಂಗ್ ವ್ಯಾಸಂಗ ಮಾಡುತ್ತಿದ್ದರು ಎಂದು ತಿಳಿದುಬಂದಿದೆ.

ವಸತಿ ನಿಲಯದ ನಾಲ್ಕನೇ ಮಹಡಿಯಿಂದ ಕೆಳಗೆ ಬಿದ್ದ ಮುಜಾಹೀದ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎನ್ನಲಾಗಿದೆ. ಇದು ಕೊಲೆಯೋ ಅಥವಾ ಆತ್ಮಹತ್ಯೆಯೋ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಘಟನೆಯ ಕುರಿತು ಪೊಲೀಸರು ತನಿಖೆ ಆರಂಭಿಸಿದ್ದಾರೆ.

ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ., ಡಿಸಿಪಿ ಶಾಲೂ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬ್ರಹ್ಮಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಇದೇ ವಸತಿ ನಿಲಯದ ಸಮೀಪದಲ್ಲಿರುವ ಅಂಬೇಡ್ಕರ್ ವಸತಿ ನಿಲಯದಲ್ಲಿ ಮೊನ್ನೆಯಷ್ಟೇ ವಿದ್ಯಾರ್ಥಿಯೊಬ್ಬನನ್ನು ಚೆತ್ತಲೆಗೊಳಿಸಿ ಮಾರಣಾಂತಿಕವಾಗಿ ಹಲ್ಲೆ ನಡೆಸಿದ ಘಟನೆ ನಡೆದಿತ್ತು. ಇದರ ಬೆನ್ನಲ್ಲೇ ಮತ್ತೊಂದು ವಸತಿ ನಿಲಯದಲ್ಲಿ ವಿದ್ಯಾರ್ಥಿಯೊಬ್ಬನ ಅನುಮಾನಾಸ್ಪದ ಸಾವು ಸಂಭವಿಸಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ.

ಪ್ರಜಾ ಸೇವಾ ಅಭಿಯಾನ ಜನಸ್ಪಂದನ ಸಭೆ: 52 ಅರ್ಜಿಗಳ ಸ್ವೀಕಾರ

ಕಲಬುರಗಿ:

ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಜಾ ಸೇವಾ ಅಭಿಯಾನದಡಿ ಸಾರ್ವಜನಿಕರ ಸಮಸ್ಯೆಗಳನ್ನು ಆಲಿಸಿ ತುರ್ತು ಕ್ರಮ ಕೈಗೊಳ್ಳುವ ಉದ್ದೇಶದಿಂದ ಕಲಬುರಗಿ ತಾಲೂಕಿನ ಫರಹತಾಬಾದ್ ಹೋಬಳಿಯ ಶರಣಬಸವೇಶ್ವರ ದೇವಸ್ಥಾನದ ಕಲ್ಯಾಣ ಮಂಟಪದಲ್ಲಿ ಶುಕ್ರವಾರ ಜನಸ್ಪಂದನ ಸಭೆ ನಡೆಯಿತು.

ಅಫಜಲಪುರ ವಿಧಾನಸಭಾ ಕ್ಷೇತ್ರದ ಶಾಸಕ ಎಂ.ವೈ. ಪಾಟೀಲ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಒಟ್ಟು 52 ಅಹವಾಲುಗಳು ಹಾಗೂ ಅರ್ಜಿಗಳನ್ನು ಸಾರ್ವಜನಿಕರಿಂದ ಸ್ವೀಕರಿಸಲಾಯಿತು.

ಇವುಗಳಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದ 37, ಪಂಚಾಯತ್ ರಾಜ್ ಇಲಾಖೆಯ 10, ಆಹಾರ ಇಲಾಖೆಯ ಎರಡು, ವಿದ್ಯುತ್ ಸರಬರಾಜು ಇಲಾಖೆಯ ಒಂದು, ಕಲ್ಯಾಣ ಕರ್ನಾಟಕ ಸಾರಿಗೆ ಇಲಾಖೆಯ ಒಂದು ಹಾಗೂ ಶಿಶು ಪಾಲನಾ ಅಭಿವೃದ್ಧಿ ಇಲಾಖೆಯ ಒಂದು ಅರ್ಜಿ ಸೇರಿವೆ.



ಸ್ವೀಕೃತವಾದ ಒಟ್ಟು ಅರ್ಜಿಗಳ ಪೈಕಿ ಕಂದಾಯ ಇಲಾಖೆಗೆ ಸಂಬಂಧಿಸಿದ 15 ಅರ್ಜಿಗಳನ್ನು ಸ್ಥಳದಲ್ಲಿಯೇ ಇತ್ಯರ್ಥಪಡಿಸಲಾಯಿತು. ಉಳಿದ ಅಹವಾಲುಗಳ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳಿಂದ ಮಾಹಿತಿ ಪಡೆದು, ನಿಯಮಾನುಸಾರ ಪರಿಶೀಲಿಸಿ ಶೀಘ್ರ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ಜಿಲ್ಲಾಧಿಕಾರಿ ಇಕ್ರಂ ಶರೀಫ್ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರು ಮಾತನಾಡಿ, ಪ್ರಸ್ತುತ ತೀವ್ರ ಬರಗಾಲದ ಪರಿಸ್ಥಿತಿ ಇರುವುದರಿಂದ ಸಾರ್ವಜನಿಕರು ಹಾಗೂ ಅಧಿಕಾರಿಗಳು ಅನಗತ್ಯವಾಗಿ ನೀರು ವ್ಯರ್ಥವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಎಲ್ಲ ಅಧಿಕಾರಿಗಳು ಕಡ್ಡಾಯವಾಗಿ ತಮ್ಮ ಕೇಂದ್ರಸ್ಥಾನದಲ್ಲಿದ್ದು, ಸಾರ್ವಜನಿಕರ ಕೆಲಸ ಕಾರ್ಯಗಳನ್ನು ನಿಗದಿತ ಸಮಯದೊಳಗೆ ಯಾವುದೇ ವಿಳಂಬವಿಲ್ಲದೆ ಇತ್ಯರ್ಥಪಡಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಸಭೆಯಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಸಮದ್ ಪಟೇಲ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸಿದ್ದು ಪಾಟೀಲ, ತಹಶೀಲ್ದಾರ್ ಕೆ. ಆನಂದಶೀಲ್ ಸೇರಿದಂತೆ ಕಲಬುರಗಿ ತಾಲೂಕಿನ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.


2,320 ಬೋಧಕ ಹುದ್ದೆಗಳ ನೇಮಕಾತಿ ಶೀಘ್ರ

ಕಲಬುರಗಿ:

ಆಳಂದ ಕಾಲೇಜು ಆವರಣದಲ್ಲಿ 8 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ನೂತನ ಕಟ್ಟಡ ಹಾಗೂ 5.26 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನೂತನ ಕಟ್ಟಡವನ್ನು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರು ಶನಿವಾರ ರಿಬ್ಬನ್ ಕತ್ತರಿಸುವ ಮೂಲಕ ಉದ್ಘಾಟಿಸಿದರು.

2017-18ನೇ ಸಾಲಿನ ತಾಂತ್ರಿಕ ಶಿಕ್ಷಣ ಯೋಜನೆಯಡಿ 8 ಕೋಟಿ ರೂ. ವೆಚ್ಚದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಕಟ್ಟಡ ನಿರ್ಮಿಸಲಾಗಿದೆ. ಕಾಲೇಜು ಶಿಕ್ಷಣ ಇಲಾಖೆಯ 2023-24ನೇ ಸಾಲಿನ ಕೆಕೆಆರ್‌ಡಿಬಿ (ಮ್ಯಾಕ್ರೋ/ಮೈಕ್ರೋ) ಯೋಜನೆಯಡಿ 5.26 ಕೋಟಿ ರೂ. ವೆಚ್ಚದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನೂತನ ಕಟ್ಟಡ ನಿರ್ಮಿಸಲಾಗಿದೆ.

ನಂತರ ಮಾತನಾಡಿದ ಸಚಿವ ಬಸವರಾಜ ರಾಯರೆಡ್ಡಿ, ರಾಜ್ಯದ ಒಟ್ಟು 4.48 ಲಕ್ಷ ಕೋಟಿ ರೂ. ಮೊತ್ತದ ಬಜೆಟ್‌ನಲ್ಲಿ ಶಿಕ್ಷಣ ಕ್ಷೇತ್ರಕ್ಕೆ 55 ಸಾವಿರ ಕೋಟಿ ರೂ. (ಶೇ.11.6) ಅನುದಾನ ಮೀಸಲಿಡಲಾಗಿದೆ. ಗುಣಮಟ್ಟದ ಶಿಕ್ಷಣ ಒದಗಿಸುವ ಉದ್ದೇಶದಿಂದ ರಾಜ್ಯದ ವಿವಿಧ ಕಾಲೇಜುಗಳಲ್ಲಿ ಖಾಲಿ ಇರುವ 1,000 ಬೋಧಕ ಹುದ್ದೆಗಳು, ವಿಶ್ವವಿದ್ಯಾಲಯಗಳಲ್ಲಿ 1,000 ಪ್ರಾಧ್ಯಾಪಕ ಹುದ್ದೆಗಳು ಹಾಗೂ 320 ಪ್ರಾಂಶುಪಾಲರ ಹುದ್ದೆಗಳನ್ನು ಶೀಘ್ರದಲ್ಲೇ ಮೆರಿಟ್ ಆಧಾರದ ಮೇಲೆ ಭರ್ತಿ ಮಾಡಲಾಗುವುದು ಎಂದರು.



ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಖಾಲಿ ಇರುವ 800 ಹುದ್ದೆಗಳು ಸೇರಿದಂತೆ ಒಟ್ಟು 2,320 ಹುದ್ದೆಗಳನ್ನು ಯಾವುದೇ ಭ್ರಷ್ಟಾಚಾರಕ್ಕೆ ಅವಕಾಶ ನೀಡದೆ ನೇರವಾಗಿ ಮೆರಿಟ್ ಆಧಾರದ ಮೇಲೆ ನೇಮಕ ಮಾಡಲಾಗುವುದು ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಪ್ರತಿವರ್ಷ 5,000 ಕೋಟಿ ರೂ. ಅನುದಾನ ನೀಡಲಾಗುತ್ತಿದೆ. ಸಂವಿಧಾನದ 371(ಜೆ) ವಿಧಿಯ ಅನುಷ್ಠಾನದಿಂದ ಈ ಭಾಗದ ಯುವಕರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಹೆಚ್ಚಿನ ಮೀಸಲಾತಿ ದೊರೆಯುತ್ತಿದೆ. ಪಿಡಬ್ಲ್ಯುಡಿ ಅಪೆಂಡಿಕ್ಸ್ ಅಡಿಯಲ್ಲಿ 50 ಕೋಟಿ ರೂ., ಎಚ್‌ಎಚ್‌ಡಿಪಿ ಅಡಿಯಲ್ಲಿ 50 ಕೋಟಿ ರೂ. ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ರಸ್ತೆ ಮತ್ತು ಗ್ರಾಮ ಪಂಚಾಯಿತಿಗಳ ಅಭಿವೃದ್ಧಿಗೆ ವಿಶೇಷ ಅನುದಾನ ನೀಡಲಾಗುತ್ತಿದೆ ಎಂದು ಹೇಳಿದರು.

ಇದಕ್ಕೂ ಮುನ್ನ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ಕಲಬುರಗಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಸಹಯೋಗದಲ್ಲಿ ಆಳಂದ ಪಟ್ಟಣದಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಿರುವ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೆ ಸಚಿವರು ಶಂಕುಸ್ಥಾಪನೆ ನೆರವೇರಿಸಿದರು.

ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ ಮಾತನಾಡಿ, ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರ ನೇತೃತ್ವದಲ್ಲಿ ಆಳಂದ ತಾಲೂಕಿನಲ್ಲಿ ಎರಡು ಕಾಲೇಜುಗಳ ನೂತನ ಕಟ್ಟಡಗಳನ್ನು ಉದ್ಘಾಟಿಸಲಾಗಿದೆ. ಹಿಂದಿನ ಅವಧಿಯಲ್ಲಿ ಮಂಜೂರಾಗಿದ್ದ ಕಾಲೇಜುಗಳಿಗೆ ಗುಣಮಟ್ಟದ ಕಟ್ಟಡಗಳನ್ನು ನಿರ್ಮಿಸಿ ಇದೀಗ ಲೋಕಾರ್ಪಣೆ ಮಾಡಲಾಗಿದೆ ಎಂದರು.

ಬೀದರ್ ಲೋಕಸಭಾ ಕ್ಷೇತ್ರದ ಸಂಸದ ಸಾಗರ್ ಈಶ್ವರ ಖಂಡ್ರೆ ಮಾತನಾಡಿ, ಶಿಕ್ಷಣ ಕ್ಷೇತ್ರದಲ್ಲಿ ಇನ್ನಷ್ಟು ಸುಧಾರಣೆಗಳಾಗಬೇಕು. ಕಾಲೇಜುಗಳ ನಿರ್ಮಾಣದ ಜೊತೆಗೆ ಗುಣಮಟ್ಟದ ಬೋಧಕ ಸಿಬ್ಬಂದಿ ನೇಮಕಾತಿಗೂ ಆದ್ಯತೆ ನೀಡಬೇಕು. ಬರಗಾಲದಿಂದ ಸಂಕಷ್ಟಕ್ಕೀಡಾದ ರೈತರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಸೂಕ್ತ ಪರಿಹಾರ ಹಾಗೂ ಬೆಳೆ ವಿಮೆ ದೊರೆಯುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಮಾತನಾಡಿ, ರಾಜ್ಯ ರಾಜಕಾರಣದಲ್ಲಿ ಎಂಟು ಬಾರಿ ಶಾಸಕರಾಗಿ, ಸಂಸದರು ಹಾಗೂ ಸಚಿವರಾಗಿ ಸೇವೆ ಸಲ್ಲಿಸಿರುವ ಬಸವರಾಜ ರಾಯರೆಡ್ಡಿ ಅವರ ಆಡಳಿತಾತ್ಮಕ ಅನುಭವ ಮತ್ತು ಕೊಡುಗೆ ಅಪಾರವಾಗಿದೆ. ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಬಜೆಟ್‌ಗಳಲ್ಲಿ ರಾಯರೆಡ್ಡಿ ಅವರ ಪಾತ್ರ ಮಹತ್ವದ್ದಾಗಿದೆ ಎಂದರು.

ಆಳಂದ ಕ್ಷೇತ್ರದ ಶಾಸಕ ಬಿ.ಆರ್. ಪಾಟೀಲ ಅವರು ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಕಲಬುರಗಿ ಜಿಲ್ಲೆಯಲ್ಲಿ ಹೆಚ್ಚಿನ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಡಾ. ಬಿ.ಆರ್. ಅಂಬೇಡ್ಕರ್ ಅವರ ಶಿಕ್ಷಣದ ಕನಸನ್ನು ನನಸು ಮಾಡಲು ಬಿ.ಆರ್. ಪಾಟೀಲ ಹಾಗೂ ಪ್ರಿಯಾಂಕ್ ಖರ್ಗೆ ಶ್ರಮಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕಷ್ಟದ ಸಂದರ್ಭದಲ್ಲಿಯೂ 650 ಕೋಟಿ ರೂ. ಗೂ ಅಧಿಕ ಅನುದಾನ ತಂದು ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿರುವ ಬಿ.ಆರ್. ಪಾಟೀಲ ಅವರ ಕಾರ್ಯವನ್ನು ಸ್ಮರಿಸಿದರು.

ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲ ಪ್ರಕಾಶ್ ಬುರೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕ ಪಂಡಿತ ಬೆಳಮಗಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಡಾ. ವಿ. ಅಶೋಕ್, ತಹಶೀಲ್ದಾರ್ ಅಣ್ಣಾರಾವ ಪಾಟೀಲ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲೆ ಪ್ರೇಮಿಳಾ ಅಂಬರಾಯ, ಸಿದ್ದರಾಮ ಪ್ಯಾಟಿ, ಗುರುಶರಣ ಪಾಟೀಲ, ಸೈಯದ್ ಮಜರ್ ಹುಸೇನ್, ಸುಭಾಷ್ ಮುರುಡ, ಸಲಾಂ ಸಗರಿ, ನಾಗೇಂದ್ರಪ್ಪ ತಂಬೆ, ರಾಜಶೇಖರ ಪಾಟೀಲ, ಸುನೀಲಗೌಡ ಪಾಟೀಲ, ಬಸವರಾಜ ಪವಾಡಶೆಟ್ಟಿ, ದಶವಂತ ಸೇರಿದಂತೆ ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಟ್ರಂಪ್ ಸೊಕ್ಕು ಮುರಿದ ಅಮೆರಿಕನ್ನರು; ಸರ್ವಾಧಿಕಾರದ ಮದಕ್ಕೆ ಜನಾದೇಶದ ಪೆಟ್ಟು!

ದ್ವೇಷ, ಜನಾಂಗೀಯ ಧ್ರುವೀಕರಣ, ಆಕ್ರಮಣಕಾರಿ ರಾಷ್ಟ್ರೀಯತೆ, ಯುದ್ಧೋನ್ಮಾದ ಹಾಗೂ ಕಾರ್ಪೊರೇಟ್ ಹಿತಾಸಕ್ತಿಗಳ ರಾಜಕಾರಣವನ್ನು ಮುಂದಿಟ್ಟುಕೊಂಡು ಜನಸಾಮಾನ್ಯರ ಬದುಕನ್ನು ದುರ್ಭರಗೊಳಿಸಿದ್ದರು ಡೊನಾಲ್ಡ್ ಟ್ರಂಪ್. ಅವರಿಗೆ ಅಮೆರಿಕದ ಮತದಾರರು ತಕ್ಕ ಉತ್ತರ ನೀಡಿದ್ದಾರೆ. ರಿಪಬ್ಲಿಕನ್ ಪಕ್ಷದ ಭದ್ರಕೋಟೆಗಳಲ್ಲಿಯೇ ಸೋಲುಣಿಸಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಇಷ್ಟವಿಲ್ಲದ ಪದ ಸೋಲು. ತಾನು ಸೋಲುವುದಿಲ್ಲ, ತನ್ನ ನಿರ್ಧಾರಗಳೇ ಅಂತಿಮ, ತನ್ನನ್ನು ವಿರೋಧಿಸುವವರು ದೇಶದ ಹಿತಶತ್ರುಗಳೆಂದು ಆಕ್ರಮಣಕಾರಿಯಾಗಿ ದೂರುವುದು ಅವರ ಧೋರಣೆ. ಅಮೆರಿಕದ ಅಧಿಕಾರವನ್ನು ತಮ್ಮ ವೈಯಕ್ತಿಕ ಪ್ರತಿಷ್ಠೆಯ ವಿಸ್ತರಣೆಯೆಂದು ಭಾವಿಸಿರುವ ಟ್ರಂಪ್‌ಗೆ ಈಗ ಅದೇ ದೇಶದ ಮತದಾರರು ದೊಡ್ಡ ಪೆಟ್ಟು ಕೊಟ್ಟಿದ್ದಾರೆ.

2026ರ ನವೆಂಬರ್ 3ರಂದು ನಡೆದ ಅಮೆರಿಕದ ಮಧ್ಯಂತರ ಚುನಾವಣೆಯಲ್ಲಿ ರಿಪಬ್ಲಿಕನ್ ಪಕ್ಷ ಹೀನಾಯ ಸೋಲುಂಡಿದೆ. ಡೆಮಾಕ್ರಟಿಕ್ ಪಕ್ಷ ಸಂಸತ್ತಿನ ಎರಡೂ ಸದನಗಳ ನಿಯಂತ್ರಣವನ್ನು ತನ್ನದಾಗಿಸಿಕೊಂಡಿದೆ. ದಶಕಗಳಿಂದ ರಿಪಬ್ಲಿಕನ್ ಪಕ್ಷದ ಭದ್ರಕೋಟೆಗಳಾಗಿದ್ದ ರಾಜ್ಯಗಳಲ್ಲಿಯೂ ಮತದಾರರು ಟ್ರಂಪ್ ವಿರುದ್ಧ ಮತಚಲಾಯಿಸಿದ್ದಾರೆ.

ಇದು ಕೇವಲ ಅಮೆರಿಕದ ಎರಡು ರಾಜಕೀಯ ಪಕ್ಷಗಳ ನಡುವಿನ ಅಧಿಕಾರ ಬದಲಾವಣೆಯಲ್ಲ. ಟ್ರಂಪ್ ಅವರ ಎರಡನೇ ಅವಧಿಯ ಆಡಳಿತದಲ್ಲಿ ಹೆಚ್ಚಾದ ಆರ್ಥಿಕ ಅನಿಶ್ಚಿತತೆ, ದುಬಾರಿ ಜೀವನ, ವಲಸಿಗರ ವಿರುದ್ಧದ ಕಠಿಣ ನೀತಿಗಳು, ಜನಾಂಗೀಯ ಧ್ರುವೀಕರಣ ಹಾಗೂ ಇರಾನ್ ಯುದ್ಧದಂತಹ ನಿರ್ಧಾರಗಳ ವಿರುದ್ಧ ವ್ಯಕ್ತವಾದ ಅಸಮಾಧಾನದ ರಾಜಕೀಯ ಪರಿಣಾಮವಿದು.



ಈ ಚುನಾವಣೆಯನ್ನು ಸ್ವತಃ ಟ್ರಂಪ್ ತಮ್ಮ ನಾಯಕತ್ವದ ಜನಮತಗಣನೆ ಎಂದು ಹೇಳಿಕೊಂಡಿದ್ದರು. ರಿಪಬ್ಲಿಕನ್ ಅಭ್ಯರ್ಥಿಗಳಿಗೆ ಮತ ನೀಡುವಾಗ ತಾನೇ ಸ್ಪರ್ಧಿಸುತ್ತಿರುವುದಾಗಿ ಭಾವಿಸಿ ಮತ ಚಲಾಯಿಸುವಂತೆ ಕರೆ ನೀಡಿದ್ದರು. ಮತದಾರರು ಅವರ ಕರೆಯನ್ನು ಗಂಭೀರವಾಗಿಯೇ ತೆಗೆದುಕೊಂಡಿದ್ದಾರೆ. ಆದರೆ, ಟ್ರಂಪ್ ವಿರುದ್ಧವೇ ಮತಚಲಾಯಿಸಿದ್ದಾರೆ.

ಟೆಕ್ಸಾಸ್‌ನಲ್ಲಿ ಸುಮಾರು ನಾಲ್ಕು ದಶಕಗಳ ನಂತರ ಡೆಮಾಕ್ರಟಿಕ್ ಪಕ್ಷ ಸೆನೆಟ್ ಸ್ಥಾನ ಮತ್ತು ರಾಜ್ಯಪಾಲರ ಹುದ್ದೆಯನ್ನು ಗೆದ್ದಿದೆ. ಕನ್ಸಾಸ್‌ನಲ್ಲಿ 1932ರ ನಂತರ ಮೊದಲ ಬಾರಿಗೆ ಡೆಮಾಕ್ರಟಿಕ್ ಅಭ್ಯರ್ಥಿ ಸೆನೆಟ್‌ಗೆ ಆಯ್ಕೆಯಾಗಿದ್ದಾರೆ. ಮೇನ್ ರಾಜ್ಯದಲ್ಲಿ ಮೂರು ದಶಕಗಳಿಂದ ಡೆಮಾಕ್ರಟಿಕ್ ಪಕ್ಷಕ್ಕೆ ಸವಾಲಾಗಿದ್ದ ರಿಪಬ್ಲಿಕನ್ ಸೆನೆಟರ್ ಸುಸಾನ್ ಕಾಲಿನ್ಸ್ ಸೋತಿದ್ದಾರೆ. ಅಯೋವಾ ಸೇರಿದಂತೆ ಹಲವು ರಾಜ್ಯಗಳಲ್ಲಿಯೂ ರಿಪಬ್ಲಿಕನ್ ಪ್ರಾಬಲ್ಯಕ್ಕೆ ಹೊಡೆತ ಬಿದ್ದಿದೆ.

ಇವೆಲ್ಲ ಆಕಸ್ಮಿಕ ಸೋಲುಗಳಲ್ಲ. ಟ್ರಂಪ್ ರಾಜಕಾರಣದ ವಿರುದ್ಧ ವಿವಿಧ ಜನ ವರ್ಗಗಳ ಮತದಾರರಲ್ಲಿ ಬೆಳೆಯುತ್ತಿರುವ ಅಸಮಾಧಾನದ ಸಂಕೇತಗಳು. ಈ ಸೋಲಿನ ಮಹತ್ವದ ಅಂಶ ಅಮೆರಿಕದ ಸಾಮಾನ್ಯ ಜನರ ಬದುಕಿನಲ್ಲಿದೆ.

ಅಂದಹಾಗೆ, ಅಮೆರಿಕದ ಆರ್ಥಿಕತೆ ಬೆಳೆಯುತ್ತಿದೆ, ಷೇರು ಮಾರುಕಟ್ಟೆ ದಾಖಲೆಗಳನ್ನು ಮುರಿಯುತ್ತಿದೆ, ಅಮೆರಿಕ ಮತ್ತೆ ಜಗತ್ತಿನ ಅತ್ಯಂತ ಬಲಿಷ್ಠ ರಾಷ್ಟ್ರವಾಗುತ್ತಿದೆ ಎಂಬ ಘೋಷಣೆಗಳನ್ನು ಟ್ರಂಪ್ ಆಡಳಿತ ನಿರಂತರವಾಗಿ ಮಾಡುತ್ತಿತ್ತು. ಆದರೆ, ಸಾಮಾನ್ಯ ಅಮೆರಿಕನ್ನರ ಅಡುಗೆಮನೆಯ ಲೆಕ್ಕಾಚಾರ ಅದಕ್ಕೆ ತದ್ವಿರುದ್ಧವಾಗಿತ್ತು. ಆಹಾರ, ಮನೆಬಾಡಿಗೆ, ಇಂಧನ, ಆರೋಗ್ಯ ಸೇವೆ, ಸಾಲದ ಕಂತುಗಳ ಹೊರೆ ಜನರ ಬದುಕನ್ನು ಹೈರಾಣಾಗಿಸಿತ್ತು.

ಹಣದುಬ್ಬರವನ್ನು ನಿಯಂತ್ರಿಸುವುದಾಗಿ ಅಧಿಕಾರಕ್ಕೆ ಬಂದ ಟ್ರಂಪ್, ಆಮದು ಸುಂಕಗಳ ಮೂಲಕ ವ್ಯಾಪಾರಯುದ್ಧ ಆರಂಭಿಸಿದರು. ಇರಾನ್ ವಿರುದ್ಧದ ಯುದ್ಧಕ್ಕೆ ಮುಂದಾದರು. ಅದರ ಪರಿಣಾಮವಾಗಿ ಇಂಧನ ಬೆಲೆಗಳು ಹೆಚ್ಚಾದವು. ಸಾಗಣೆ ವೆಚ್ಚ ಏರಿತು. ರೈತರು, ಕಾರ್ಮಿಕರು, ಸಣ್ಣ ಉದ್ಯಮಿಗಳು ಹಾಗೂ ಮಧ್ಯಮ ವರ್ಗದ ಕುಟುಂಬಗಳು ಆರ್ಥಿಕ ಒತ್ತಡಕ್ಕೆ ಸಿಲುಕಿದವು.

ಆದರೆ, ಇದೆಲ್ಲವನ್ನೂ ಬದಿಗಿಟ್ಟಿದ್ದ ಟ್ರಂಪ್, ಷೇರು ಮಾರುಕಟ್ಟೆಯ ಬೆಳವಣಿಗೆಯೇ ಆರ್ಥಿಕ ಸಮೃದ್ಧಿಯ ಮಾನದಂಡವೆಂದು ಭಾವಿಸಿದ್ದರು. ಇದು ಟ್ರಂಪ್ ಅವರ ದೊಡ್ಡ ವೈಫಲ್ಯ. ಈಗ, ದೇಶದ ಷೇರು ಮಾರುಕಟ್ಟೆ ಎಷ್ಟೇ ಎತ್ತರಕ್ಕೆ ಏರಿದರೂ ಜನರ ಅಡುಗೆಮನೆಯ ಖರ್ಚು ಕಡಿಮೆಯಾಗುವುದಿಲ್ಲ. ರಾಷ್ಟ್ರೀಯತೆಯ ಘೋಷಣೆಗಳಿಂದ ಹಸಿವು ನೀಗುವುದಿಲ್ಲ. ಬಲಿಷ್ಠ ನಾಯಕನ ಭಾಷಣಗಳಿಂದ ನಿರುದ್ಯೋಗಿಯ ಕೈಗೆ ಕೆಲಸ ಸಿಗುವುದಿಲ್ಲ ಎಂಬ ಪಾಠವನ್ನು ಅಮೆರಿಕನ್ನರು ಟ್ರಂಪ್‌ಗೆ ಕಲಿಸಿದ್ದಾರೆ.

ಎಲ್ಲಕ್ಕಿಂತ ಮಿಗಿಲಾಗಿ, 2024ರಲ್ಲಿ ಟ್ರಂಪ್ ಅವರನ್ನು ಬೆಂಬಲಿಸಿದ್ದ ಯುವ ಮತದಾರರು ಎರಡು ವರ್ಷಗಳಲ್ಲಿಯೇ ಅವರಿಂದ ದೂರ ಸರಿದಿದ್ದಾರೆ. ಚುನಾವಣೋತ್ತರ ಅಧ್ಯಯನಗಳ ಪ್ರಕಾರ, 18ರಿಂದ 29 ವರ್ಷ ವಯಸ್ಸಿನ ಮತದಾರರಲ್ಲಿ ಸುಮಾರು ಮೂರನೇ ಎರಡರಷ್ಟು ಮಂದಿ ಡೆಮಾಕ್ರಟಿಕ್ ಅಭ್ಯರ್ಥಿಗಳನ್ನು ಬೆಂಬಲಿಸಿದ್ದಾರೆ. ಉದ್ಯೋಗದ ಭವಿಷ್ಯ, ಶಿಕ್ಷಣದ ಸಾಲ, ವಸತಿ ವೆಚ್ಚ, ಆರ್ಥಿಕ ಸ್ವಾತಂತ್ರ್ಯ ಹಾಗೂ ಸಾಮಾಜಿಕ ಭದ್ರತೆಯ ವಿಷಯಗಳನ್ನು ಗಮನದಲ್ಲಿಟ್ಟುಕೊಂಡು ಯುವಜನರು ಮತ ಚಲಾಯಿಸಿದ್ದಾರೆ.

ಅಂತೆಯೇ, ಹಿಸ್ಪಾನಿಕ್, ಏಷ್ಯನ್, ಭಾರತೀಯ ಹಾಗೂ ಕಪ್ಪು ವರ್ಣೀಯ ಮತದಾರರು ಟ್ರಂಪ್ ವಿರುದ್ಧ ದನಿ ಎತ್ತಿದ್ದಾರೆ. ಟ್ರಂಪ್ ಅವರ ವೀಸಾ ನೀತಿಗಳು, ಉದ್ಯೋಗದಲ್ಲಿನ ಅನಿಶ್ಚಿತತೆ ಹಾಗೂ ಜನಾಂಗೀಯ ಭಾವನೆ ಕೆರಳಿಸುವ ಧೋರಣೆಗಳ ವಿರುದ್ಧ ವಿದೇಶಿ ಅಮೆರಿಕನ್ನರು ಮತ ದಾಖಲಿಸಿದ್ದಾರೆ.

ಇರಾನ್ ವಿರುದ್ಧದ ಅಮೆರಿಕ ಘೋಷಿಸಿದ ಯುದ್ಧವೂ ಅಮೆರಿಕನ್ನರಿಗೆ ಆರ್ಥಿಕ ಸಂಕಷ್ಟ ಸೃಷ್ಟಿಸಿದೆ. ಯುದ್ಧದ ಪರಿಣಾಮವಾಗಿ, ತೈಲ ಬೆಲೆ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದೆ. ಯುದ್ಧಕ್ಕಾಗಿ ವೆಚ್ಚವಾಗುವ ಶತಕೋಟಿ ಡಾಲರ್‌ಗಳು ಸಾರ್ವಜನಿಕ ಶಿಕ್ಷಣ, ಆರೋಗ್ಯ, ವಸತಿ ಹಾಗೂ ಸಾಮಾಜಿಕ ಭದ್ರತೆಯ ಅಗತ್ಯಗಳೊಂದಿಗೆ ನೇರ ಸಂಬಂಧ ಹೊಂದಿವೆ. ಟ್ರಂಪ್ ಅವರ ಈ ಏಕಪಕ್ಷೀಯ ವಿದೇಶಾಂಗ ನೀತಿಯ ವಿರುದ್ಧವೂ ಅಮೆರಿಕನ್ನರು ಜನಾದೇಶ ನೀಡಿದ್ದಾರೆ. ಟ್ರಂಪ್ ಅವರ ಸೊಕ್ಕು ಅಡಗಿಸಿದ್ದಾರೆ.

ಅಮೆರಿಕದ ಜನಾದೇಶವು ಭಾರತಕ್ಕೂ ಅಷ್ಟೇ ಪ್ರಸ್ತುತ. ಭಾರತದಲ್ಲಿ ಮೋದಿ ಸರ್ಕಾರವು ರಾಷ್ಟ್ರೀಯತೆ, ಸಾಂಸ್ಕೃತಿಕ ಅಸ್ಮಿತೆ, ಬಲಿಷ್ಠ ನಾಯಕತ್ವದ ಪ್ರಚಾರಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ಅದೇ ಸಮಯದಲ್ಲಿ ದೇಶದ ಜನಸಾಮಾನ್ಯರು ನಿರುದ್ಯೋಗ, ಬೆಲೆ ಏರಿಕೆ, ಕೃಷಿ ಸಂಕಷ್ಟ, ದುಬಾರಿ ಶಿಕ್ಷಣ, ಆರೋಗ್ಯ ವೆಚ್ಚ ಹಾಗೂ ಆದಾಯದ ಅನಿಶ್ಚಿತತೆಯನ್ನು ಎದುರಿಸುತ್ತಿದ್ದಾರೆ.

ಜಿಡಿಪಿಯ ಬೆಳವಣಿಗೆ, ಷೇರು ಮಾರುಕಟ್ಟೆಯ ಸಾಧನೆ, ಬೃಹತ್ ಕಾರ್ಪೊರೇಟ್ ಹೂಡಿಕೆ ಹಾಗೂ ಜಾಗತಿಕ ಆರ್ಥಿಕ ಶಕ್ತಿ ಎಂಬ ದೂರದ ಬೆಟ್ಟವನ್ನು ಮೋದಿ ತೋರುತ್ತಿದ್ದಾರೆ. ಆದರೆ, ಜನಸಾಮಾನ್ಯರು ದೇಶದ ಅಭಿವೃದ್ಧಿಯ ಫಲ ಯಾರಿಗೆ ತಲುಪುತ್ತಿದೆ, ಕಾರ್ಮಿಕರ ನೈಜ ವೇತನ ಎಷ್ಟು ಹೆಚ್ಚಾಗಿದೆ, ಯುವಜನರಿಗೆ ಅವರ ಅರ್ಹತೆಗೆ ತಕ್ಕ ಉದ್ಯೋಗ ದೊರೆಯುತ್ತಿದೆಯೇ, ರೈತರ ಉತ್ಪಾದನಾ ವೆಚ್ಚಕ್ಕೆ ಅನುಗುಣವಾಗಿ ಆದಾಯ ಹೆಚ್ಚುತ್ತಿದೆಯೇ ಹಾಗೂ ಶಿಕ್ಷಣ ಮತ್ತು ಆರೋಗ್ಯ ಸೇವೆಗಳು ಸಾಮಾನ್ಯ ಕುಟುಂಬಗಳ ಕೈಗೆಟುಕುತ್ತಿವೆಯೇ ಎಂಬುದನ್ನು ನೋಡುತ್ತಿದ್ದಾರೆ.

ಆದರೆ, ಈ ಎಲ್ಲ ಪ್ರಶ್ನೆಗಳಿಗೂ ಒಂದೇ ಉತ್ತರ ಇಲ್ಲ. ಆದ್ದರಿಂದ, ಅಭಿವೃದ್ಧಿಯ ಬಗ್ಗೆ ಮೋದಿ ಸರ್ಕಾರ ಎಷ್ಟೇ ಪ್ರಚಾರ ನಡೆಸಿದರೂ, ಜನರು ತಮ್ಮ ಬದುಕಿನ ವಾಸ್ತವದ ಮೇಲೆಯೇ ಮತಚಲಾಯಿಸುತ್ತಾರೆ.

ಆದ್ದರಿಂದ, ಅಮೆರಿಕದ ಜನಾದೇಶವು ಆಡಳಿತದ ಆರ್ಥಿಕ ನೀತಿಗಳು, ಸಾರ್ವಜನಿಕ ಉತ್ತರದಾಯಿತ್ವ ಹಾಗೂ ಜನರ ಜೀವನಮಟ್ಟಕ್ಕೆ ಚುನಾವಣೆಯಲ್ಲಿ ದೊರೆಯುವ ಮಹತ್ವವನ್ನು ಮತ್ತೊಮ್ಮೆ ತೋರಿಸಿದೆ. ಇತಿಹಾಸದಲ್ಲಿ ಯಾವ ನಾಯಕನೂ ಶಾಶ್ವತವಲ್ಲ. ಯಾವ ರಾಜಕೀಯ ಪಕ್ಷದ ಪ್ರಾಬಲ್ಯವೂ ಅಜೇಯವಲ್ಲ. ಯಾವ ಭದ್ರಕೋಟೆಯೂ ಎಂದೆಂದಿಗೂ ಭದ್ರವಾಗಿರುವುದಿಲ್ಲ. ಜನರ ಬದುಕಿನ ಪ್ರಶ್ನೆಗಳನ್ನು ನಿರ್ಲಕ್ಷಿಸುವ ರಾಜಕಾರಣಕ್ಕೆ ಭವಿಷ್ಯವೂ ಇಲ್ಲ ಎಂಬ ಸಂದೇಶವನ್ನು ಜಗತ್ತಿಗೆ ರವಾನಿಸಿದೆ.

ಆದಾಗ್ಯೂ ಟ್ರಂಪ್ ವಿರುದ್ಧದ ಅಸಮಾಧಾನವನ್ನು ತನ್ನ ಚುನಾವಣಾ ಲಾಭವನ್ನಾಗಿ ಮಾಡಿಕೊಂಡಿರುವ ಡೆಮಾಕ್ರಟಿಕ್ ಪಕ್ಷವು ಈಗ ಜನರ ಆರ್ಥಿಕ ಸಂಕಷ್ಟಗಳಿಗೆ ಕಾರ್ಯಸಾಧ್ಯವಾದ ಪರ್ಯಾಯಗಳನ್ನು ಮುಂದಿಡಬೇಕಿದೆ. ಯುದ್ಧ, ಕಾರ್ಪೊರೇಟ್ ಪ್ರಾಬಲ್ಯ, ಸಾಮಾಜಿಕ ಅಸಮಾನತೆ ಹಾಗೂ ವಲಸಿಗರ ಹಕ್ಕುಗಳ ವಿಚಾರದಲ್ಲಿ ತನ್ನ ಬದ್ಧತೆಯನ್ನು ಪ್ರದರ್ಶಿಸಬೇಕಿದೆ.

ಅದೇನೇ ಇರಲಿ, ಟ್ರಂಪ್ ಅವರ ರಾಜಕೀಯ ಅಹಂಕಾರಕ್ಕೆ ಅಮೆರಿಕ ಮತದಾರರು ದೊಡ್ಡ ಪೆಟ್ಟು ನೀಡಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಅಂತಿಮವಾಗಿ ದೊಡ್ಡವರು ನಾಯಕನಲ್ಲ; ಜನತೆ ಎಂಬುದನ್ನು ಸಾಬೀತು ಮಾಡಿದ್ದಾರೆ!

ಸಾಮಾಜಿಕ ನ್ಯಾಯ ಕಾಂಗ್ರೆಸ್ ಸರ್ಕಾರದ ಭರವಸೆಗಳು ಮತ್ತು ಅಲ್ಪಸಂಖ್ಯಾತರ ವಾಸ್ತವ ಸ್ಥಿತಿ

ಅಲ್ಪಸಂಖ್ಯಾತರ ಕಲ್ಯಾಣ ಎಂದರೆ ಕೇವಲ ಮುಸ್ಲಿಂ ಸಮುದಾಯದ ಅಭಿವೃದ್ಧಿಯಲ್ಲ. ಕ್ರೈಸ್ತರು, ಜೈನರು, ಸಿಖ್ಖರು, ಬೌದ್ಧರು ಮತ್ತು ಇತರ ಧಾರ್ಮಿಕ ಅಲ್ಪಸಂಖ್ಯಾತರ ಶಿಕ್ಷಣ, ಉದ್ಯೋಗ, ವಸತಿ ಮತ್ತು ಆರ್ಥಿಕ ಅಭಿವೃದ್ಧಿಯ ಅಗತ್ಯಗಳನ್ನೂ ಸಮಾನವಾಗಿ ಪರಿಗಣಿಸಬೇಕು. ಅನುದಾನದ ಪ್ರಮಾಣಕ್ಕಿಂತ ಅದರ ಪ್ರಯೋಜನ ಸಮಾಜದ ಕಟ್ಟಕಡೆಯ ವ್ಯಕ್ತಿಗೆ ತಲುಪಿದೆಯೇ ಎಂಬುದೇ ನಿಜವಾದ ಸಾಧನೆಯ ಮಾನದಂಡವಾಗಬೇಕು.

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷಗಳ ಆಡಳಿತವನ್ನು ಪೂರ್ಣಗೊಳಿಸಿರುವ ಸಂದರ್ಭದಲ್ಲಿ, 2023ರ ವಿಧಾನಸಭಾ ಚುನಾವಣೆಯಲ್ಲಿ ಅಲ್ಪಸಂಖ್ಯಾತರಿಗೆ ನೀಡಿದ್ದ ಭರವಸೆಗಳು ಎಷ್ಟರ ಮಟ್ಟಿಗೆ ಕಾರ್ಯರೂಪಕ್ಕೆ ಬಂದಿವೆ ಎಂಬ ಪ್ರಶ್ನೆ ಸಹಜವಾಗಿಯೇ ಮುನ್ನೆಲೆಗೆ ಬಂದಿದೆ. ಚುನಾವಣೆಯ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮೇಲೆ ವಿಶ್ವಾಸವಿಟ್ಟು ಬೆಂಬಲಿಸಿದ್ದ ಅಲ್ಪಸಂಖ್ಯಾತ ಸಮುದಾಯಗಳು, ವಿಶೇಷವಾಗಿ ಮುಸ್ಲಿಂ ಮತದಾರರು, ಸರ್ಕಾರದಿಂದ ನಿರೀಕ್ಷಿಸಿದ್ದ ಬದಲಾವಣೆಗಳು ಸಂಪೂರ್ಣವಾಗಿ ಸಾಕಾರಗೊಂಡಿವೆಯೇ ಎಂಬುದನ್ನು ಪರಿಶೀಲಿಸುವ ಕಾಲವಿದು. ಅಧಿಕಾರ ಬದಲಾವಣೆಯೊಂದಿಗೆ ನೀತಿಗಳಲ್ಲಿಯೂ ಬದಲಾವಣೆ ಆಗಲಿದೆ, ಹಿಂದಿನ ಸರ್ಕಾರದ ಅವಧಿಯಲ್ಲಿ ಎದುರಿಸಿದ್ದ ಅನ್ಯಾಯಗಳಿಗೆ ಪರಿಹಾರ ದೊರೆಯಲಿದೆ ಮತ್ತು ಸಾಮಾಜಿಕ ನ್ಯಾಯಕ್ಕೆ ಹೊಸ ಆಯಾಮ ಸಿಗಲಿದೆ ಎಂಬ ನಿರೀಕ್ಷೆ ಸಮುದಾಯಗಳಲ್ಲಿತ್ತು. ಆದರೆ ಆಡಳಿತದ ಮೂರು ವರ್ಷಗಳ ನಂತರವೂ ಕೆಲವು ಪ್ರಮುಖ ಬೇಡಿಕೆಗಳು ನಿರ್ಧಾರದ ಹಂತ ತಲುಪದೆ ಉಳಿದಿರುವುದು ಸರ್ಕಾರದ ಆದ್ಯತೆ ಮತ್ತು ರಾಜಕೀಯ ಇಚ್ಛಾಶಕ್ತಿಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

2023ರ ಮೇ 2ರಂದು ಬಿಡುಗಡೆ ಮಾಡಿದ ಚುನಾವಣಾ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಪಕ್ಷ ಹಲವು ಸ್ಪಷ್ಟ ಭರವಸೆಗಳನ್ನು ನೀಡಿತ್ತು. ಹಿಂದಿನ ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಅನ್ಯಾಯಕರ ಮತ್ತು ಜನವಿರೋಧಿ ಕಾನೂನುಗಳನ್ನು ಅಧಿಕಾರಕ್ಕೆ ಬಂದ ಒಂದು ವರ್ಷದೊಳಗೆ ರದ್ದುಪಡಿಸುವುದು, ಧರ್ಮ ಮತ್ತು ಜಾತಿಯ ಹೆಸರಿನಲ್ಲಿ ದ್ವೇಷ ಹರಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದು, ಮುಸ್ಲಿಮರ ನಾಲ್ಕು ಶೇಕಡಾ ಮೀಸಲಾತಿಯನ್ನು ಮರುಸ್ಥಾಪಿಸುವುದು ಹಾಗೂ ಧಾರ್ಮಿಕ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಐದು ವರ್ಷಗಳಲ್ಲಿ 10,000 ಕೋಟಿ ರೂಪಾಯಿ ಮೀಸಲಿಡುವುದು ಅವುಗಳಲ್ಲಿ ಪ್ರಮುಖವಾಗಿದ್ದವು. ಈ ಭರವಸೆಗಳು ಕೇವಲ ಚುನಾವಣಾ ಪ್ರಚಾರದ ಭಾಗವಾಗಿರಲಿಲ್ಲ; ಹಿಂದಿನ ಆಡಳಿತದ ನೀತಿಗಳಿಂದ ಅಸಮಾಧಾನಗೊಂಡಿದ್ದ ಸಮುದಾಯಗಳಲ್ಲಿ ಹೊಸ ಭರವಸೆಯನ್ನು ಮೂಡಿಸಿದ್ದವು. ಹೀಗಾಗಿ ಅವುಗಳ ಅನುಷ್ಠಾನದ ಬಗ್ಗೆ ಪ್ರಶ್ನಿಸುವುದು ಸರ್ಕಾರ ವಿರೋಧಿ ರಾಜಕಾರಣವಲ್ಲ, ಪ್ರಜಾಪ್ರಭುತ್ವದಲ್ಲಿ ಮತದಾರರಿಗೆ ಇರುವ ಸಹಜ ಹಕ್ಕು.

2026ರ ಅಕ್ಟೋಬರ್ 29ರಂದು ಬೆಂಗಳೂರಿನಲ್ಲಿ ನಡೆದ ಜಂಟಿ ಪತ್ರಿಕಾಗೋಷ್ಠಿ ಸರ್ಕಾರದ ಮುಂದೆ ಉಳಿದಿರುವ ಈ ಪ್ರಶ್ನೆಗಳನ್ನು ಮತ್ತೊಮ್ಮೆ ಮುನ್ನೆಲೆಗೆ ತಂದಿತು. ಆರ್ಚ್‌ಬಿಷಪ್ ಪೀಟರ್ ಮಚಾಡೊ, ಕರ್ನಾಟಕ ರಾಜ್ಯ ಮುಸ್ಲಿಂ ಒಕ್ಕೂಟದ ಸಂಚಾಲಕ ಮೊಹಮ್ಮದ್ ಯಾಹ್ಯಾ ದಾಮೂದಿ ಸೇರಿದಂತೆ ಧಾರ್ಮಿಕ ಅಲ್ಪಸಂಖ್ಯಾತರು, ನಾಗರಿಕ ಸಂಘಟನೆಗಳು ಮತ್ತು ಮಾನವ ಹಕ್ಕುಗಳ ಪ್ರತಿನಿಧಿಗಳು ಹಲವು ಬೇಡಿಕೆಗಳನ್ನು ಮಂಡಿಸಿದರು. 2022ರ ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ ಕಾಯ್ದೆಯನ್ನು ಹಿಂಪಡೆಯುವುದು, 2020ರ ಜಾನುವಾರು ಹತ್ಯೆ ನಿಷೇಧ ಮತ್ತು ಸಂರಕ್ಷಣಾ ಕಾಯ್ದೆಯನ್ನು ಮರುಪರಿಶೀಲಿಸುವುದು ಹಾಗೂ ದ್ವೇಷ ಭಾಷಣ ಮತ್ತು ದ್ವೇಷಾಪರಾಧಗಳ ವಿರುದ್ಧ ಪರಿಣಾಮಕಾರಿ ಕ್ರಮ ಕೈಗೊಳ್ಳುವುದು ಅವರ ಪ್ರಮುಖ ಆಗ್ರಹಗಳಾಗಿದ್ದವು.

ಮೂರು ವರ್ಷಗಳ ಹಿಂದೆ ಬದಲಾವಣೆಯ ಭರವಸೆ ನೀಡಿದ್ದ ಸರ್ಕಾರದ ಮುಂದೆ ಈಗಲೂ ಇದೇ ಬೇಡಿಕೆಗಳನ್ನು ಪುನರಾವರ್ತಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದು ಗಮನಾರ್ಹ. ಇದನ್ನು ಕೇವಲ ಕೆಲವು ಸಂಘಟನೆಗಳ ಅಸಮಾಧಾನವೆಂದು ತಳ್ಳಿಹಾಕಲು ಸಾಧ್ಯವಿಲ್ಲ. ಸರ್ಕಾರದ ನೀತಿಗಳು ಮತ್ತು ಅವುಗಳ ಅನುಷ್ಠಾನದ ನಡುವಿನ ಅಂತರವನ್ನು ಗುರುತಿಸುವ ಪ್ರಯತ್ನವಾಗಿ ಇದನ್ನು ಪರಿಗಣಿಸಬೇಕಾಗಿದೆ.

ಧಾರ್ಮಿಕ ಸ್ವಾತಂತ್ರ್ಯ: ಭರವಸೆ ಮತ್ತು ವಾಸ್ತವದ ನಡುವಿನ ಅಂತರ

ಹಿಂದಿನ ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಮತಾಂತರ ನಿಷೇಧ ಕಾಯ್ದೆ ಕ್ರೈಸ್ತ ಸಮುದಾಯದ ಪ್ರಮುಖ ಆಕ್ಷೇಪಕ್ಕೆ ಕಾರಣವಾಗಿದೆ. ಸಂವಿಧಾನದ 25ನೇ ವಿಧಿಯು ಪ್ರತಿಯೊಬ್ಬರಿಗೂ ಆತ್ಮಸಾಕ್ಷಿಯ ಸ್ವಾತಂತ್ರ್ಯ, ಧರ್ಮವನ್ನು ನಂಬುವ, ಆಚರಿಸುವ ಮತ್ತು ಪ್ರಚಾರ ಮಾಡುವ ಹಕ್ಕನ್ನು ನೀಡುತ್ತದೆ. ಬಲವಂತ, ವಂಚನೆ ಅಥವಾ ಆಮಿಷದ ಮೂಲಕ ನಡೆಯುವ ಮತಾಂತರದ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದಕ್ಕೂ ಧಾರ್ಮಿಕ ಸ್ವಾತಂತ್ರ್ಯವನ್ನು ರಕ್ಷಿಸುವುದಕ್ಕೂ ವಿರೋಧಾಭಾಸವಿಲ್ಲ. ಆದರೆ ಕಾನೂನಿನ ಅನುಷ್ಠಾನವು ಸಂವಿಧಾನಾತ್ಮಕ ಹಕ್ಕುಗಳನ್ನು ಉಲ್ಲಂಘಿಸದಂತೆ ಮತ್ತು ಯಾವುದೇ ಧಾರ್ಮಿಕ ಸಮುದಾಯವನ್ನು ಅನಗತ್ಯ ಅನುಮಾನಕ್ಕೆ ಒಳಪಡಿಸದಂತೆ ನೋಡಿಕೊಳ್ಳುವುದು ಸರ್ಕಾರದ ಕರ್ತವ್ಯ.

ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಈ ಕಾಯ್ದೆಯನ್ನು ಹಿಂಪಡೆಯುವುದಾಗಿ ಭರವಸೆ ನೀಡಿತ್ತು. ಆದರೆ ಮೂರು ವರ್ಷಗಳ ಆಡಳಿತದ ನಂತರವೂ ಕಾಯ್ದೆ ಜಾರಿಯಲ್ಲಿರುವುದು ಅದರ ಅನುಷ್ಠಾನದ ಬಗ್ಗೆ ಪ್ರಶ್ನೆಗಳನ್ನು ಎಬ್ಬಿಸಿದೆ. ವಿಧಾನ ಪರಿಷತ್ತಿನಲ್ಲಿನ ಸಂಖ್ಯಾಬಲದ ಕೊರತೆಯನ್ನು ಸರ್ಕಾರ ಈ ಹಿಂದೆ ವಿಳಂಬಕ್ಕೆ ಕಾರಣವಾಗಿ ಉಲ್ಲೇಖಿಸಿತ್ತು. ಆದರೆ ರಾಜಕೀಯ ಅಡಚಣೆಗಳಿದ್ದರೂ ಪರ್ಯಾಯ ಕಾನೂನು ಕ್ರಮಗಳು, ತಿದ್ದುಪಡಿಗಳು ಮತ್ತು ಸಂವಿಧಾನಾತ್ಮಕ ಪರಿಹಾರಗಳ ಕುರಿತು ಸರ್ಕಾರ ತನ್ನ ನಿಲುವನ್ನು ಸ್ಪಷ್ಟಪಡಿಸಬೇಕಿತ್ತು. ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ ಭರವಸೆಯನ್ನು ಕೇವಲ ರಾಜಕೀಯ ಪರಿಸ್ಥಿತಿಯ ಕಾರಣಕ್ಕೆ ಅನಿರ್ದಿಷ್ಟವಾಗಿ ಮುಂದೂಡುವುದು ಸಮರ್ಥನೀಯವಲ್ಲ.

ಇದೇ ರೀತಿಯಲ್ಲಿ ಜಾನುವಾರು ಹತ್ಯೆ ನಿಷೇಧ ಕಾಯ್ದೆಯ ಪರಿಣಾಮಗಳನ್ನೂ ಸಮಗ್ರವಾಗಿ ಪರಿಶೀಲಿಸಬೇಕಿದೆ. ಈ ಕಾನೂನಿನ ಪರಿಣಾಮವು ಕೇವಲ ಮಾಂಸ ವ್ಯಾಪಾರಕ್ಕೆ ಸೀಮಿತವಾಗಿಲ್ಲ. ಕುರೇಶಿ ಸಮುದಾಯದ ಸಾಂಪ್ರದಾಯಿಕ ಜೀವನೋಪಾಯ, ರೈತರ ಪಶುಸಂಗೋಪನೆ, ಜಾನುವಾರು ವ್ಯಾಪಾರ, ಮಾಂಸ ಮಾರಾಟ, ಚರ್ಮೋದ್ಯಮ, ಸಾಗಣೆ ಮತ್ತು ಅವುಗಳಿಗೆ ಸಂಬಂಧಿಸಿದ ಸಣ್ಣ ಉದ್ಯಮಗಳ ಮೇಲೂ ಪರಿಣಾಮ ಬೀರಿದೆ ಎಂಬ ಅಹವಾಲುಗಳಿವೆ. ಪಶುಸಂರಕ್ಷಣೆ, ರೈತರ ಹಿತಾಸಕ್ತಿ, ಉದ್ಯೋಗ ಮತ್ತು ಸಾಂಪ್ರದಾಯಿಕ ವೃತ್ತಿಗಳ ನಡುವೆ ಸಮತೋಲನ ಸಾಧಿಸುವುದು ಸರ್ಕಾರದ ಜವಾಬ್ದಾರಿ. ಕಾಯ್ದೆಯ ಸಾಮಾಜಿಕ ಮತ್ತು ಆರ್ಥಿಕ ಪರಿಣಾಮಗಳ ಕುರಿತು ಸಮಗ್ರ ಅಧ್ಯಯನ ನಡೆಸಿ, ಅಗತ್ಯ ಬದಲಾವಣೆಗಳ ಬಗ್ಗೆ ನಿರ್ಧಾರ ಕೈಗೊಳ್ಳಬೇಕಾಗಿದೆ.

ಹಿಜಾಬ್ ನಿರ್ಧಾರ ಸ್ವಾಗತಾರ್ಹ; ಆದರೆ ಅದೊಂದೇ ಸಾಕಾಗದು

ಹಿಜಾಬ್ ವಿಚಾರದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವನ್ನು ಗುರುತಿಸಬೇಕಿದೆ. 2026ರ ಮೇ 13ರಂದು ಹಿಂದಿನ ಬಿಜೆಪಿ ಸರ್ಕಾರದ 2022ರ ಫೆಬ್ರವರಿ 5ರ ಆದೇಶವನ್ನು ಹಿಂಪಡೆದು,



ನಿಗದಿತ ಸಮವಸ್ತ್ರ ನಿಯಮಗಳಿಗೆ ಒಳಪಟ್ಟು ಹಿಜಾಬ್ ಸೇರಿದಂತೆ ಧಾರ್ಮಿಕ ಮತ್ತು ಸಾಂಪ್ರದಾಯಿಕ ಸಂಕೇತಗಳಿಗೆ ಅವಕಾಶ ಕಲ್ಪಿಸಿರುವುದು ಮಹತ್ವದ ನಿರ್ಧಾರವಾಗಿದೆ. ಈ ಕ್ರಮವು ಶಿಕ್ಷಣ ಸಂಸ್ಥೆಗಳಲ್ಲಿ ಧಾರ್ಮಿಕ ಸ್ವಾತಂತ್ರ್ಯ ಮತ್ತು ವಿದ್ಯಾರ್ಥಿನಿಯರ ಶಿಕ್ಷಣದ ಹಕ್ಕಿನ ನಡುವಿನ ಸಮತೋಲನಕ್ಕೆ ಸಂಬಂಧಿಸಿದ ಚರ್ಚೆಗೆ ಹೊಸ ದಿಕ್ಕು ನೀಡಿದೆ.

ಆದರೆ ಒಂದು ಪ್ರಮುಖ ನಿರ್ಧಾರವನ್ನು ಸಮಗ್ರ ಅಲ್ಪಸಂಖ್ಯಾತರ ಕಲ್ಯಾಣದ ಸಾಧನೆಯಾಗಿ ಬಿಂಬಿಸುವುದು ಸರಿಯಲ್ಲ. ಹಿಜಾಬ್ ಸಮಸ್ಯೆಗೆ ಪರಿಹಾರ ದೊರೆತಿರುವುದರಿಂದ ಮೀಸಲಾತಿ, ಉದ್ಯೋಗ, ಶಿಕ್ಷಣ, ಆರ್ಥಿಕ ಸಬಲೀಕರಣ, ಧಾರ್ಮಿಕ ಸ್ವಾತಂತ್ರ್ಯ ಮತ್ತು ರಾಜಕೀಯ ಪ್ರಾತಿನಿಧ್ಯದ ಎಲ್ಲ ಪ್ರಶ್ನೆಗಳೂ ಬಗೆಹರಿದಂತಾಗುವುದಿಲ್ಲ. ಸರ್ಕಾರದ ಸಾಧನೆಯನ್ನು ಪ್ರತ್ಯೇಕವಾಗಿ ಗುರುತಿಸುವುದರ ಜೊತೆಗೆ ಬಾಕಿ ಉಳಿದಿರುವ ವಿಚಾರಗಳನ್ನೂ ಅಷ್ಟೇ ಗಂಭೀರವಾಗಿ ಪರಿಶೀಲಿಸಬೇಕು.

ನಾಲ್ಕು ಶೇಕಡಾ ಮೀಸಲಾತಿ: ನಿರ್ಧಾರಕ್ಕಾಗಿ ಕಾಯುತ್ತಿರುವ ಸಮುದಾಯ

ಮುಸ್ಲಿಮರ ನಾಲ್ಕು ಶೇಕಡಾ ಮೀಸಲಾತಿಯ ಮರುಸ್ಥಾಪನೆ ಕಾಂಗ್ರೆಸ್ ಸರ್ಕಾರದ ಮುಂದಿರುವ ಪ್ರಮುಖ ಚುನಾವಣಾ ಭರವಸೆಗಳಲ್ಲಿ ಒಂದಾಗಿದೆ. 2023ರ ಮಾರ್ಚ್ 27ರಂದು ಹಿಂದಿನ ಬಿಜೆಪಿ ಸರ್ಕಾರ ಮುಸ್ಲಿಮರಿಗೆ ಅನ್ವಯಿಸುತ್ತಿದ್ದ 2ಬಿ ವರ್ಗದ ಮೀಸಲಾತಿಯನ್ನು ರದ್ದುಪಡಿಸಿ, ಅದರ ಫಲಾನುಭವಿಗಳನ್ನು ಇತರ ಹಿಂದುಳಿದ ವರ್ಗಗಳ ವರ್ಗೀಕರಣದಲ್ಲಿ ಮರುಹೊಂದಿಸಲು ನಿರ್ಧರಿಸಿತ್ತು. ಈ ನಿರ್ಧಾರವು ರಾಜಕೀಯ ಮತ್ತು ಕಾನೂನು ಚರ್ಚೆಗೆ ಕಾರಣವಾಗಿತ್ತು. ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಹಿಂದಿನ ಮೀಸಲಾತಿಯನ್ನು ಮರುಸ್ಥಾಪಿಸುವುದಾಗಿ ಭರವಸೆ ನೀಡಿದ್ದರೂ, ಈ ವಿಷಯದಲ್ಲಿ ನಿರ್ಣಾಯಕ ಪರಿಹಾರ ಇನ್ನೂ ಎದುರುನೋಡಬೇಕಾದ ಸ್ಥಿತಿಯಲ್ಲಿದೆ.

2026ರ ಮೇ 16ರಂದು ನಡೆದ ಮುಸ್ಲಿಂ ಸಮುದಾಯದ ಸಮಾವೇಶದಲ್ಲಿ ಮಂಡಿಸಲಾದ 75 ಪುಟಗಳ ವರದಿಯೂ ಮೀಸಲಾತಿ, ಶಿಕ್ಷಣ, ಉದ್ಯೋಗ, ಆರ್ಥಿಕ ಸ್ವಾವಲಂಬನೆ ಮತ್ತು ರಾಜಕೀಯ ಪ್ರಾತಿನಿಧ್ಯದ ಕೊರತೆಗಳನ್ನು ಪ್ರಮುಖವಾಗಿ ಉಲ್ಲೇಖಿಸಿತ್ತು. ಮೀಸಲಾತಿಯ ಬೇಡಿಕೆಯನ್ನು ಕೇವಲ ರಾಜಕೀಯ ಭರವಸೆಯಾಗಿ ಉಳಿಸದೆ, ಸಮುದಾಯದ ಸಾಮಾಜಿಕ ಮತ್ತು ಶೈಕ್ಷಣಿಕ ಹಿಂದುಳಿದಿರುವಿಕೆ, ಲಭ್ಯವಿರುವ ದತ್ತಾಂಶ ಹಾಗೂ ಸಂವಿಧಾನಾತ್ಮಕ ನಿಯಮಗಳ ಆಧಾರದಲ್ಲಿ ಪರಿಹರಿಸುವ ಅಗತ್ಯವಿದೆ. ನ್ಯಾಯಾಲಯಗಳ ನಿರ್ದೇಶನಗಳನ್ನು ಗೌರವಿಸುವುದರ ಜೊತೆಗೆ ಕಾನೂನುಬದ್ಧವಾಗಿ ಸಮರ್ಥಿಸಬಹುದಾದ ಪರಿಹಾರವನ್ನು ರೂಪಿಸುವುದು ಸರ್ಕಾರದ ಹೊಣೆಗಾರಿಕೆ.

ಇಲ್ಲಿ ಜಾತಿ ಸಮೀಕ್ಷೆಯ ವರದಿಯೂ ಮಹತ್ವ ಪಡೆಯುತ್ತದೆ. ರಾಜ್ಯದ ವಿವಿಧ ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸ್ಥಿತಿಗತಿಯನ್ನು ಗುರುತಿಸುವ ಉದ್ದೇಶದಿಂದ ನಡೆಸಿದ ಸಮೀಕ್ಷೆಯ ಅಂಕಿಅಂಶಗಳು ಸಾಮಾಜಿಕ ನ್ಯಾಯದ ನೀತಿಗಳಿಗೆ ಆಧಾರವಾಗಬೇಕು. ಆದರೆ ವರದಿಯ ವಿಶ್ವಾಸಾರ್ಹತೆ, ಸಮೀಕ್ಷಾ ವಿಧಾನ, ದತ್ತಾಂಶದ ನಿಖರತೆ ಮತ್ತು ಅದರ ಆಧಾರದ ಮೇಲೆ ಕೈಗೊಳ್ಳುವ ನಿರ್ಧಾರಗಳಲ್ಲಿ ಪಾರದರ್ಶಕತೆ ಅತ್ಯಗತ್ಯ. ಸಮುದಾಯಗಳ ಜನಸಂಖ್ಯೆಯ ಕುರಿತು ಸಾರ್ವಜನಿಕ ಚರ್ಚೆಯಲ್ಲಿ ಕೇಳಿಬರುವ ಅಂದಾಜುಗಳನ್ನು ಅಧಿಕೃತ ಅಂತಿಮ ಅಂಕಿಅಂಶಗಳೆಂದು ಪರಿಗಣಿಸುವ ಬದಲು, ಪರಿಶೀಲಿತ ದತ್ತಾಂಶದ ಆಧಾರದಲ್ಲಿ ಮೀಸಲಾತಿ ಮತ್ತು ಕಲ್ಯಾಣ ನೀತಿಗಳನ್ನು ರೂಪಿಸಬೇಕು. ಸಾಮಾಜಿಕ ನ್ಯಾಯವು ರಾಜಕೀಯ ಲೆಕ್ಕಾಚಾರಕ್ಕೆ ಸೀಮಿತವಾಗದೆ ವಾಸ್ತವಿಕ ಹಿಂದುಳಿದಿರುವಿಕೆಯನ್ನು ಪರಿಹರಿಸುವ ಸಾಧನವಾಗಬೇಕು.

10,000 ಕೋಟಿ ರೂಪಾಯಿ ಭರವಸೆ: ಘೋಷಣೆಯಷ್ಟೇ ಅಲ್ಲ, ಫಲಿತಾಂಶವೂ ಮುಖ್ಯ

ಧಾರ್ಮಿಕ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಐದು ವರ್ಷಗಳಲ್ಲಿ 10,000 ಕೋಟಿ ರೂಪಾಯಿ ಒದಗಿಸುವ ಕಾಂಗ್ರೆಸ್ ಭರವಸೆಯ ಅನುಷ್ಠಾನವೂ ಪರಿಶೀಲನೆಗೆ ಒಳಪಡಬೇಕಿದೆ. 2026-27ರ ರಾಜ್ಯ ಬಜೆಟ್‌ನಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕೆ 4,762 ಕೋಟಿ ರೂಪಾಯಿ ಮೀಸಲಿಟ್ಟಿರುವುದಾಗಿ ಬಜೆಟ್ ವಿಶ್ಲೇಷಣೆಗಳು ಸೂಚಿಸುತ್ತವೆ. ಈ ಮೊತ್ತವನ್ನು ಸ್ವಾಗತಿಸುವುದರ ಜೊತೆಗೆ, ಐದು ವರ್ಷಗಳ ಒಟ್ಟು ಭರವಸೆಯ ಎದುರು ಸರ್ಕಾರ ಎಷ್ಟು ಹಣವನ್ನು ನಿಜವಾಗಿ ಬಿಡುಗಡೆ ಮಾಡಿದೆ ಮತ್ತು ಎಷ್ಟು ವೆಚ್ಚ ಮಾಡಿದೆ ಎಂಬುದನ್ನು ತಿಳಿದುಕೊಳ್ಳುವುದು ಮುಖ್ಯ.

ಬಜೆಟ್‌ನಲ್ಲಿ ಘೋಷಿಸಿದ ಅನುದಾನ, ಇಲಾಖೆಗೆ ಬಿಡುಗಡೆಯಾದ ಹಣ, ವಾಸ್ತವವಾಗಿ ಖರ್ಚಾದ ಮೊತ್ತ ಮತ್ತು ಫಲಾನುಭವಿಗಳಿಗೆ ತಲುಪಿದ ಪ್ರಯೋಜನ ಇವು ಒಂದೇ ಅರ್ಥವನ್ನು ನೀಡುವುದಿಲ್ಲ. ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಿದವರು ಮತ್ತು ನೆರವು ಪಡೆದವರ ಸಂಖ್ಯೆ, ವಸತಿ ನಿಲಯಗಳ ಲಭ್ಯತೆ, ಶಾಲಾ-ಕಾಲೇಜುಗಳ ಮೂಲಸೌಕರ್ಯ, ಕೌಶಲ್ಯ ತರಬೇತಿ, ಉದ್ಯೋಗಾವಕಾಶಗಳು, ಮಹಿಳೆಯರ ಆರ್ಥಿಕ ಸ್ವಾವಲಂಬನೆ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಗಳ ಮೂಲಕ ನೆರವು ಪಡೆದ ಫಲಾನುಭವಿಗಳ ವಿವರಗಳನ್ನು ಸರ್ಕಾರ ಸಾರ್ವಜನಿಕಗೊಳಿಸಬೇಕು.

ಅಲ್ಪಸಂಖ್ಯಾತರ ಕಲ್ಯಾಣ ಎಂದರೆ ಕೇವಲ ಮುಸ್ಲಿಂ ಸಮುದಾಯದ ಅಭಿವೃದ್ಧಿಯಲ್ಲ. ಕ್ರೈಸ್ತರು, ಜೈನರು, ಸಿಖ್ಖರು, ಬೌದ್ಧರು ಮತ್ತು ಇತರ ಧಾರ್ಮಿಕ ಅಲ್ಪಸಂಖ್ಯಾತರ ಶಿಕ್ಷಣ, ಉದ್ಯೋಗ, ವಸತಿ ಮತ್ತು ಆರ್ಥಿಕ ಅಭಿವೃದ್ಧಿಯ ಅಗತ್ಯಗಳನ್ನೂ ಸಮಾನವಾಗಿ ಪರಿಗಣಿಸಬೇಕು. ಅನುದಾನದ ಪ್ರಮಾಣಕ್ಕಿಂತ ಅದರ ಪ್ರಯೋಜನ ಸಮಾಜದ ಕಟ್ಟಕಡೆಯ ವ್ಯಕ್ತಿಗೆ ತಲುಪಿದೆಯೇ ಎಂಬುದೇ ನಿಜವಾದ ಸಾಧನೆಯ ಮಾನದಂಡವಾಗಬೇಕು.

ಮತಗಳ ಪಾಲುದಾರಿಕೆ ಆಡಳಿತದಲ್ಲೂ ಪ್ರತಿಫಲಿಸಬೇಕಿದೆ

ಅಲ್ಪಸಂಖ್ಯಾತರ ಸಮಸ್ಯೆಗಳಲ್ಲಿ ಅತ್ಯಂತ ಕಡಿಮೆ ಚರ್ಚೆಯಾಗುವ, ಆದರೆ ಅತ್ಯಂತ ಮಹತ್ವದ ವಿಚಾರ ರಾಜಕೀಯ ಪ್ರಾತಿನಿಧ್ಯ. ಚುನಾವಣೆಯ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಬೆಂಬಲವನ್ನು ಬಯಸುವ ರಾಜಕೀಯ ಪಕ್ಷಗಳು, ಅಧಿಕಾರಕ್ಕೆ ಬಂದ ನಂತರ ನೀತಿ ನಿರ್ಧಾರಗಳಲ್ಲಿ ಅವರ ಧ್ವನಿಗೆ ಎಷ್ಟು ಅವಕಾಶ ನೀಡುತ್ತವೆ ಎಂಬುದನ್ನು ಪರಿಶೀಲಿಸಬೇಕಾಗಿದೆ. ವಿಧಾನಸಭೆ ಮತ್ತು ವಿಧಾನ ಪರಿಷತ್ತು ಮಾತ್ರವಲ್ಲದೆ ಸ್ಥಳೀಯ ಸಂಸ್ಥೆಗಳು, ಜಿಲ್ಲಾ ಪಂಚಾಯಿತಿಗಳು, ನಿಗಮ-ಮಂಡಳಿಗಳು ಮತ್ತು ಆಡಳಿತಾತ್ಮಕ ನಿರ್ಧಾರ ಕೈಗೊಳ್ಳುವ ವ್ಯವಸ್ಥೆಗಳಲ್ಲಿಯೂ ಸಮರ್ಪಕ ಪ್ರಾತಿನಿಧ್ಯ ಇರಬೇಕು.

ಕೆಲವು ಸಚಿವ ಸ್ಥಾನಗಳು ಅಥವಾ ನಾಮನಿರ್ದೇಶಿತ ಹುದ್ದೆಗಳನ್ನು ನೀಡುವುದರಿಂದ ಮಾತ್ರ ರಾಜಕೀಯ ಪಾಲುದಾರಿಕೆ ಪೂರ್ಣಗೊಳ್ಳುವುದಿಲ್ಲ. ಸಮುದಾಯದ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವುದರ ಜೊತೆಗೆ, ಅವುಗಳಿಗೆ ಪರಿಹಾರ ರೂಪಿಸುವ ಪ್ರಕ್ರಿಯೆಯಲ್ಲಿಯೂ ಪಾಲ್ಗೊಳ್ಳುವ ಅವಕಾಶ ದೊರೆಯಬೇಕು. ಚುನಾವಣೆಯಲ್ಲಿ ಬೆಂಬಲ ನೀಡಿದ ಸಮುದಾಯವು ಆಡಳಿತದಲ್ಲಿ ಕೇವಲ ಫಲಾನುಭವಿಯಾಗಿ ಉಳಿಯದೆ, ನೀತಿ ನಿರ್ಧಾರಗಳಲ್ಲಿಯೂ ಪಾಲುದಾರನಾಗಬೇಕು.

ಸರ್ಕಾರದಷ್ಟೇ ಸಮುದಾಯದ ನಾಯಕತ್ವಕ್ಕೂ ಹೊಣೆಗಾರಿಕೆ ಇದೆ

ಈ ಚರ್ಚೆಯಲ್ಲಿ ಸಮುದಾಯ ಸಂಘಟನೆಗಳು ಮತ್ತು ನಾಯಕರ ಪಾತ್ರವನ್ನೂ ನಿರ್ಲಕ್ಷಿಸಲಾಗದು. ಸರ್ಕಾರದ ಮುಂದೆ ಬೇಡಿಕೆ ಮಂಡಿಸುವುದು, ಸಮಾವೇಶಗಳನ್ನು ಆಯೋಜಿಸುವುದು ಮತ್ತು ಪತ್ರಿಕಾಗೋಷ್ಠಿಗಳನ್ನು ನಡೆಸುವುದು ಪ್ರಜಾಪ್ರಭುತ್ವದ ಸಹಜ ಪ್ರಕ್ರಿಯೆ. ಆದರೆ ಈ ಚಟುವಟಿಕೆಗಳು ನಿರಂತರ ಮತ್ತು ಫಲಿತಾಂಶ ಆಧಾರಿತ ಹೋರಾಟವಾಗಿ ರೂಪುಗೊಳ್ಳಬೇಕು. ಯಾವ ಬೇಡಿಕೆ ಯಾವ ಹಂತದಲ್ಲಿದೆ, ಸರ್ಕಾರ ಯಾವ ಪ್ರತಿಕ್ರಿಯೆ ನೀಡಿದೆ, ಯಾವ ನಿರ್ಧಾರ ಬಾಕಿಯಿದೆ ಮತ್ತು ಮುಂದಿನ ಕ್ರಮವೇನು ಎಂಬುದನ್ನು ದಾಖಲಿಸುವ ವ್ಯವಸ್ಥೆ ಸಂಘಟನೆಗಳಲ್ಲಿ ಇರಬೇಕು.

ರಾಜಕೀಯ ಪಕ್ಷಗಳೊಂದಿಗೆ ಗುರುತಿಸಿಕೊಂಡಿರುವ ಸಮುದಾಯದ ನಾಯಕರು ಪಕ್ಷನಿಷ್ಠೆಗಿಂತ ಸಮುದಾಯದ ಹಿತಾಸಕ್ತಿಗೆ ಆದ್ಯತೆ ನೀಡಬೇಕು. ಸರ್ಕಾರದ ತಪ್ಪುಗಳನ್ನು ಪ್ರಶ್ನಿಸುವಾಗ ದಾಖಲೆ ಮತ್ತು ಸಾಕ್ಷ್ಯಾಧಾರಗಳೊಂದಿಗೆ ಮಾತನಾಡಬೇಕು. ಅದೇ ರೀತಿ ಸಮುದಾಯದೊಳಗಿನ ಶಿಕ್ಷಣದ ಹಿಂದುಳಿದಿರುವಿಕೆ, ನಿರುದ್ಯೋಗ, ಮಹಿಳಾ ಸಬಲೀಕರಣ ಮತ್ತು ಆರ್ಥಿಕ ದುರ್ಬಲತೆಗಳ ಪರಿಹಾರಕ್ಕೂ ಸಂಘಟನೆಗಳು ತಮ್ಮದೇ ಆದ ಕಾರ್ಯಯೋಜನೆ ರೂಪಿಸಬೇಕು. ಸರ್ಕಾರದ ಹೊಣೆಗಾರಿಕೆಯನ್ನು ಪ್ರಶ್ನಿಸುವ ಹಕ್ಕು ಎಷ್ಟು ಮುಖ್ಯವೋ, ಸಮುದಾಯದ ಪರವಾಗಿ ಮಾತನಾಡುವ ನಾಯಕರ ಸಾರ್ವಜನಿಕ ಉತ್ತರದಾಯಿತ್ವವೂ ಅಷ್ಟೇ ಮುಖ್ಯ.

ಭರವಸೆಗಳ ಲೆಕ್ಕಕ್ಕೆ ಕಾಲಮಿತಿ ಬೇಕು

ಕರ್ನಾಟಕದ ಕಾಂಗ್ರೆಸ್ ಸರ್ಕಾರದ ಮೂರು ವರ್ಷಗಳ ಆಡಳಿತವನ್ನು ಮೌಲ್ಯಮಾಪನ ಮಾಡುವಾಗ, ಸಾಧನೆಗಳನ್ನು ಗುರುತಿಸುವುದಕ್ಕೂ ಲೋಪಗಳನ್ನು ಪ್ರಶ್ನಿಸುವುದಕ್ಕೂ ಸಮಾನ ಮಹತ್ವ ನೀಡಬೇಕು. ಹಿಜಾಬ್ ಕುರಿತ ನಿರ್ಧಾರವನ್ನು ಸ್ವಾಗತಿಸುವುದರ ಜೊತೆಗೆ, ಮೀಸಲಾತಿ, ಧಾರ್ಮಿಕ ಸ್ವಾತಂತ್ರ್ಯಕ್ಕೆ ಸಂಬಂಧಿಸಿದ ಕಾನೂನುಗಳು, ದ್ವೇಷಾಪರಾಧಗಳ ನಿಯಂತ್ರಣ, ಕಲ್ಯಾಣ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಮತ್ತು ರಾಜಕೀಯ ಪ್ರಾತಿನಿಧ್ಯದ ವಿಚಾರಗಳಲ್ಲಿ ಸರ್ಕಾರದ ನಿಲುವು ಸ್ಪಷ್ಟವಾಗಬೇಕಿದೆ.

ಉಳಿದ ಆಡಳಿತಾವಧಿಯಲ್ಲಿ ಯಾವ ಭರವಸೆಯನ್ನು ಯಾವಾಗ ಈಡೇರಿಸಲಾಗುತ್ತದೆ ಎಂಬುದಕ್ಕೆ ಸರ್ಕಾರ ಕಾಲಮಿತಿಯುಳ್ಳ ಕಾರ್ಯಯೋಜನೆ ಪ್ರಕಟಿಸಬೇಕು. ಪ್ರತಿ ಇಲಾಖೆಯ ಪ್ರಗತಿ ವರದಿ, ಅನುದಾನದ ಬಿಡುಗಡೆ ಮತ್ತು ವೆಚ್ಚದ ವಿವರಗಳು ಹಾಗೂ ಫಲಾನುಭವಿಗಳಿಗೆ ತಲುಪಿದ ಪ್ರಯೋಜನಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಬೇಕು. ಆಗ ಮಾತ್ರ ಚುನಾವಣಾ ಪ್ರಣಾಳಿಕೆಯ ಭರವಸೆಗಳು ಆಡಳಿತದ ಸಾಧನೆಗಳಾಗಿ ಪರಿವರ್ತನೆಯಾಗುತ್ತವೆ.

ಅಲ್ಪಸಂಖ್ಯಾತರ ಮತಗಳು ಯಾವುದೇ ರಾಜಕೀಯ ಪಕ್ಷಕ್ಕೆ ಶಾಶ್ವತ ಬೆಂಬಲದ ಪ್ರಮಾಣಪತ್ರವಲ್ಲ. ಅವು ಸಂವಿಧಾನಾತ್ಮಕ ಹಕ್ಕುಗಳು, ಸಮಾನ ಅವಕಾಶಗಳು, ಭದ್ರತೆ, ಶಿಕ್ಷಣ, ಉದ್ಯೋಗ, ಆರ್ಥಿಕ ಪ್ರಗತಿ ಮತ್ತು ಗೌರವಯುತ ರಾಜಕೀಯ ಪಾಲ್ಗೊಳ್ಳುವಿಕೆಯನ್ನು ನಿರೀಕ್ಷಿಸುವ ನಾಗರಿಕರ ಪ್ರಜಾಸತ್ತಾತ್ಮಕ ಆಯ್ಕೆಯಾಗಿವೆ. ಹೀಗಾಗಿ ಸರ್ಕಾರದ ಯಶಸ್ಸನ್ನು ಚುನಾವಣೆಯಲ್ಲಿ ಪಡೆದ ಮತಗಳ ಆಧಾರದಲ್ಲಿ ಮಾತ್ರವಲ್ಲ, ಆ ಮತದಾರರ ಬದುಕಿನಲ್ಲಿ ಉಂಟಾದ ಬದಲಾವಣೆಯ ಆಧಾರದಲ್ಲಿಯೂ ಅಳೆಯಬೇಕು.

ಮೂರು ವರ್ಷಗಳ ಆಡಳಿತದ ನಂತರವೂ ಪ್ರಮುಖ ಭರವಸೆಗಳಿಗಾಗಿ ಸಮುದಾಯಗಳು ಮತ್ತೆ ಮತ್ತೆ ಒತ್ತಾಯಿಸಬೇಕಾದ ಸ್ಥಿತಿ ಮುಂದುವರಿದರೆ, ಅದು ಸರ್ಕಾರಕ್ಕೂ ಸಮುದಾಯದ ನಾಯಕತ್ವಕ್ಕೂ ಆತ್ಮಾವಲೋಕನದ ಸಂದರ್ಭವಾಗಿದೆ. ಚುನಾವಣಾ ಸಂದರ್ಭದಲ್ಲಿ ವ್ಯಕ್ತವಾದ ವಿಶ್ವಾಸವನ್ನು ಆಡಳಿತದಲ್ಲಿ ನ್ಯಾಯ, ಸಮಾನತೆ ಮತ್ತು ಅಭಿವೃದ್ಧಿಯ ರೂಪದಲ್ಲಿ ಮರಳಿಸುವ ಹೊಣೆ ಸರ್ಕಾರದ್ದು. ಆ ಭರವಸೆಗಳ ಅನುಷ್ಠಾನವನ್ನು ನಿರಂತರವಾಗಿ ಪ್ರಶ್ನಿಸಿ, ದಾಖಲೆಗಳ ಆಧಾರದಲ್ಲಿ ಉತ್ತರ ಕೇಳುವ ಜವಾಬ್ದಾರಿ ಸಮಾಜದ ಸಂಘಟನೆಗಳು ಮತ್ತು ನಾಯಕತ್ವದ್ದು. ಮತದಾನದ ಮೂಲಕ ದೊರೆತ ರಾಜಕೀಯ ಅಧಿಕಾರವು ಸಾಮಾಜಿಕ ನ್ಯಾಯದ ಮೂಲಕವೇ ತನ್ನ ವಿಶ್ವಾಸಾರ್ಹತೆಯನ್ನು ಸಾಬೀತುಪಡಿಸಬೇಕು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR